ವಿಜಯಪುರ | ಸಂಪುಟ 04 | ಸಂಚಿಕೆ 146 ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com RNI NO: KARKAN/2023/86203 ಶುಕ್ರವಾರ, ಜುಲೈ, 31, 2026

"ನಿರ್ಗಮಿತ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ಮತ್ತು ಪ್ರಲ್ಹಾದ್ ಜೋಶಿ ನಡುವೆ ಯಾವುದೇ ಸೈದ್ಧಾಂತಿಕ ವ್ಯತ್ಯಾಸ ಇಲ್ಲ. ಇಬ್ಬರೂ ಸಂಘ ಪರಿವಾರದ ಎಬಿವಿಪಿಯಿಂದ ಬಂದವರು. ಮಹಿಳೆಯರು, ದಲಿತರು, ಹಿಂದುಳಿದ ವರ್ಗಗಳು, ಬಡವರು ಹಾಗೂ ಅಲ್ಪಸಂಖ್ಯಾತರ ಬಗ್ಗೆ ಆರ್‌ಎಸ್‌ಎಸ್ ಹೊಂದಿರುವ ನಿಲುವನ್ನೇ ಇಬ್ಬರೂ ಹೊಂದಿದ್ದಾರೆ."



■ ಸಿದ್ಧರಾಮಯ್ಯ
ಮಾಜಿ ಮುಖ್ಯಮಂತ್ರಿ

## ಯಡ್ರಾಮಿ ವಿರಕ್ತಮಠದಲ್ಲಿ ಲಿಂಗೈಕ್ಯ ಶ್ರೀ ಸಿದ್ಧರಾಮ ಮಹಾಸ್ವಾಮಿಗಳ ಪುಣ್ಯ ಸ್ಮರಣೆಯ ತನ್ನಿಮಿತ್ತ ಶ್ರೀಮಠದಿಂದ ವಿಶೇಷ ಸತ್ಕಾರ ಹಾಗೂ ಶ್ರೀರಕ್ಷೆ ಕಾರ್ಯಕ್ರಮ

# ಹಿರಿಯ ಪತ್ರಕರ್ತರಾದ ಬಾಬುರಾವ, ಇಂದುಶೇಖರ ರಿಗೆ ಶ್ರೀಮಠದಿಂದ ಗೌರವ

■ ಉದಯರಶ್ಮಿ ದಿನಪತ್ರಿಕೆ



ಇಂದುಶೇಖರ ಮಣೂರ



ಬಾಬುರಾವ ಯಡ್ರಾಮಿ

ಯಡ್ರಾಮಿ: ಪಟ್ಟಣದ ಶ್ರೀ ಮುರಘೇಂದ್ರ ಶಿವಯೋಗಿ ವಿರಕ್ತ ಮಠದ ಲಿಂ. ಸಿದ್ಧರಾಮ ಮಹಾಸ್ವಾಮಿಗಳ ಐದನೇ ಪುಣ್ಯ ಸ್ಮರಣೆ ಅಂಗವಾಗಿ

ಪೂಜ್ಯ ಶ್ರೀ ಸಿದ್ಧಲಿಂಗ ಸ್ವಾಮಿಗಳ ನೇತೃತ್ವದಲ್ಲಿ ಕಳೆದ ಹತ್ತು ದಿನಗಳಿಂದ ಗೋಲಗೇರಿಯ ಶ್ರೀ ಗೊಲ್ಲಾಳೇಶ್ವರರ ಮಹಾಪುರಾಣ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳು ಸಾಗಿ ಬರುತ್ತಲಿವೆ.

ಶುಕ್ರವಾರ ನೂತನವಾಗಿ ನಿರ್ಮಿಸಿದ ಲಿಂ. ಸಿದ್ಧರಾಮ ಮಹಾಸ್ವಾಮಿಗಳ ಪಂಚಲೋಹದ ಮೂರ್ತಿ ಪ್ರತಿಷ್ಠಾಪನೆಗೊಳ್ಳಲಿದೆ. ಇದಕ್ಕೂ ಮುನ್ನ ಬೆಳಗ್ಗೆ ಪಟ್ಟಣದ ಮುಖ್ಯ ಬೀದಿಗಳಲ್ಲಿ ನೂತನ ಮೂರ್ತಿಯ ಭವ್ಯ ಮೆರವಣಿಗೆ ಸಾವಿರಾರು ಭಕ್ತರ ಸಮ್ಮುಖದಲ್ಲಿ ನಡೆಯಲಿದೆ. ನಂತರ ಸಾಯಂಕಾಲ ಪುರಾಣ ಕಾರ್ಯಕ್ರಮದಲ್ಲಿ ಕಲ್ಬುರ್ಗಿ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ಬಾಬುರಾವ ಯಡ್ರಾಮಿ ಹಾಗೂ ವಿಜಯಪುರ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಪ್ರಧಾನ ಕಾರ್ಯದರ್ಶಿ ಇಂದುಶೇಖರ ಮಣೂರ ಅವರನ್ನು ಶ್ರೀಮಠದಿಂದ ವಿಶೇಷ ಸತ್ಕಾರ ಹಾಗೂ ಶ್ರೀರಕ್ಷೆ ಕಾರ್ಯಕ್ರಮ ನಡೆಯಲಿದೆ ಎಂದು ಪೂಜ್ಯ ಸಿದ್ಧಲಿಂಗ ಸ್ವಾಮಿಗಳು ತಿಳಿಸಿದ್ದಾರೆ.

### ಲಕ್ಷಾಂತರ ರೂ. ಮೌಲ್ಯದ ಪುಸ್ತಕ ಕೊಡುಗೆ



ವಿಜಯಪುರ ಜಿಲ್ಲೆಯ ಹಿರಿಯ ಪತ್ರಕರ್ತರು ಲೇಖಕರು ಆದ ಇಂದುಶೇಖರ ಮಣೂರ ಅವರು ತಮ್ಮ ಸಿಂದಗಿ ಪಟ್ಟಣದ ಮನೆಯಲ್ಲಿನ ಅಂದಾಜು ರೂ.2.5 ಲಕ್ಷ ಮೌಲ್ಯದ ಪುಸ್ತಕ ಭಂಡಾರವನ್ನು ಯಡ್ರಾಮಿಯ ವಿರಕ್ತಮಠಕ್ಕೆ ತಮ್ಮ ತಂದೆಯವರಾದ ದಿ. ಸಿದ್ದಣ್ಣ ಮಾಸ್ತರ ಮಣೂರವರ ಸ್ಮರಣಾರ್ಥವಾಗಿ ಕೊಡುಗೆಯಾಗಿ ನೀಡಿದ್ದಾರೆ. ಯಡ್ರಾಮಿ ಪಟ್ಟಣದ ವಿದ್ಯಾರ್ಥಿಗಳು ಓದುಗ ಸಹೃದಯರಿಗೆ ಹಾಗೂ ಶ್ರೀಮಠದ ಭಕ್ತರಿಗೆ ಜ್ಞಾನದ ಹಸಿವನ್ನು ನೀಗಿಸುವ ಮಹತ್ತರ ಕಾರ್ಯಗೈದಿರುವುದು ಓದುಗರ ಮೆಚ್ಚುಗೆಗೆ ಪಾತ್ರವಾಗಿದೆ. ಮಣೂರವರ ಪುಸ್ತಕ ಪ್ರೇಮ ಹಾಗೂ ಪುಸ್ತಕ ಭಂಡಾರವನ್ನು ದಾನ ಮಾಡಿರುವುದು ಅತ್ಯಂತ ಶ್ಲಾಘನೀಯ ಕಾರ್ಯವಾಗಿದೆ ಎಂದು ಸಗರಾದ್ರಿ ಸಾಂಸ್ಕೃತಿಕ ಸಂಗಮ ವೇದಿಕೆ ಹರ್ಷ ವ್ಯಕ್ತಪಡಿಸಿದೆ.

## ಆ.2 ರಂದು ಮಾಜಿ ಮುಖ್ಯಮಂತ್ರಿಗಳು, ಸಂಸದರು ಹಾಗೂ ಶಾಸಕರಿಗೆ ಆಹ್ವಾನ ನೀಡಿದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್

# ಕಾವೇರಿ ಜಲ ವಿವಾದ: ಸರ್ವಪಕ್ಷ ಸಭೆ ಕರೆದ ಸಿಎಂ





ನವದೆಹಲಿ: ಕಾವೇರಿ ನೀರಿನ ವಿಚಾರವಾಗಿ ಬರುವ ಭಾನುವಾರ (ಆಗಸ್ಟ್ 2) ಗೃಹ ಕಚೇರಿ ಕೃಷ್ಣಾದಲ್ಲಿ ಸರ್ವಪಕ್ಷ ಸಭೆ ಕರೆಯಲಾಗಿದೆ. ರಾಜ್ಯದ ಮಾಜಿ ಮುಖ್ಯಮಂತ್ರಿಗಳು, ಕಾವೇರಿ ಜಲಾನಯನ ಪ್ರದೇಶದ ಸಂಸದರು, ಶಾಸಕರಿಗೆ ಆಹ್ವಾನ ನೀಡಲಾಗಿದೆ ಎಂದು ಸಿಎಂ ಡಿ ಕೆ ಶಿವಕುಮಾರ ತಿಳಿಸಿದ್ದಾರೆ.

ದೆಹಲಿಯ ಕರ್ನಾಟಕ ಭವನದಲ್ಲಿ ಮಾಧ್ಯಮಗಳ ಪ್ರಶ್ನೆಗಳಿಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿ, ಇಂದು ಕಾವೇರಿ ನೀರು ನಿರ್ವಹಣಾ ಪ್ರಾಧಿಕಾರದ (ಅಘಾಒಂ) ಮುಂದೆ ಮೇಲ್ಮನವಿ ಸಲ್ಲಿಸಿದ್ದು, ಮುಂದೆ ಈ ವಿಚಾರವನ್ನು ಹೇಗೆ ತೆಗೆದುಕೊಂಡು ಹೋಗಬೇಕು ಎಂದು ಸರ್ವಪಕ್ಷ ಸಭೆಯಲ್ಲಿ ಚರ್ಚೆ ಮಾಡಲಾಗುವುದು ಎಂದರು.

ಈ ವಿಚಾರವಾಗಿ ಸಂಸದರು, ಕೇಂದ್ರ ಸಚಿವರಾದ ಪ್ರಹ್ಲಾದ್ ಜೋಷಿ, ಸೋಮಣ್ಣ, ಜಗದೀಶ್ ಶೆಟ್ಟರ್, ಬೊಮ್ಮಾಯಿ ಅವರ ಜೊತೆ ಚರ್ಚೆ ಮಾಡಿದ್ದು, ಅವರು ರಾಜ್ಯದ ಹಿತಕ್ಕಾಗಿ ಶಕ್ತಿ ಮೀರಿ ಪ್ರಯತ್ನ ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕರ್ನಾಟಕ ಕಾಂಗ್ರೆಸ್ ನಾಯಕರ ಬದಲು ದೆಹಲಿ ಸರ್ಕಾರವನ್ನು ಭೇಟಿ ಮಾಡಿ ಎಂದು ತಮಿಳುನಾಡು ಸಿಎಂ ವಿಜಯ್ ಅವರಿಗೆ ಡಿಎಂಕೆ ನಾಯಕ ಅನ್ಬುಮಣಿ ಸಲಹೆ ನೀಡಿರುವ ಬಗ್ಗೆ ಕೇಳಿದಾಗ, "ಆ ವಿಚಾರವಾಗಿ ಪ್ರತಿಕ್ರಿಯೆ ನೀಡುವುದಿಲ್ಲ. ನಮಗೆ ಪರಸ್ಪರ ಕಿತ್ತಾಟ ಮಾಡಲು ಇಷ್ಟವಿಲ್ಲ. ನೆಲದ ಕಾನೂನು ಇದೆ. ನಾವು ಪರಸ್ಪರ ಗೌರವಿಸಬೇಕು. ಇಡೀ ದೇಶ ಒಂದಾಗಿ ಕೆಲಸ ಮಾಡಬೇಕು" ಎಂದು ತಿಳಿಸಿದರು.

### ಅಪ್ಪ-ಮಗ ಅಧಿಕಾರವನ್ನು ಅನುಭವಿಸಲಿಲ್ಲವೇ?

ಸಚಿವ ಸಂಪುಟ ವಿಸ್ತರಣೆ ಕುರಿತು ಬಿಜೆಪಿ ನಾಯಕರ ಟೀಕೆ ಬಗ್ಗೆ ಕೇಳಿದಾಗ ಸಿಎಂ ಡಿ.ಕೆ.ಶಿವಕುಮಾರ ಅವರು, "ಯಡಿಯೂರಪ್ಪನವರು ಕೂಡ ಸಚಿವ ಸಂಪುಟ ರಚನೆ ಮಾಡದೇ ಅಧಿಕಾರ ಮಾಡಿರಲಿಲ್ಲವೇ? ಆಗ ಅಪ್ಪ-ಮಗ ಅಧಿಕಾರವನ್ನು ಅನುಭವಿಸಲಿಲ್ಲವೇ?" ಎಂದು ಮರುಪ್ರಶ್ನಿಸಿದರು.

## ಸಿಂದಗಿಯ ಜಮೀನುಗಳಲ್ಲಿ ಬಿಜೆಪಿ ಮುಖಂಡರಿಂದ ಬೆಳೆ ಸಮೀಕ್ಷೆ

# ರೈತರಿಗೆ ಪ್ರತಿ ಹೆಕ್ಟರ್‌ಗೆ ರೂ.1ಲಕ್ಷ ಪರಿಹಾರ ನೀಡಿ :ಎನ್.ರವಿಕುಮಾರ

■ ಉದಯರಶ್ಮಿ ದಿನಪತ್ರಿಕೆ



ಸಿಂದಗಿ: ರಾಜ್ಯದಲ್ಲಿ ಮಳೆಯ ಕೊರತೆಯಿಂದ ರೈತರು ತೀವ್ರ ಸಂಕಷ್ಟಕ್ಕೆ ಸಿಲುಕಿದ್ದು, ತಕ್ಷಣ ರಾಜ್ಯವನ್ನು ಬರಪೀಡಿತ ಪ್ರದೇಶವೆಂದು ಘೋಷಿಸಬೇಕು. ರೈತರಿಗೆ ಪ್ರತಿ ಹೆಕ್ವೇರ್‌ಗೆ ರೂ.1ಲಕ್ಷ ಹಾಗೂ ಎಕರೆಗೆ ರೂ.50 ಸಾವಿರ ಪರಿಹಾರ ನೀಡಬೇಕು. ಬಿತ್ತನೆ ಮಾಡದ ಖಾಲಿ ಜಮೀನುಗಳಿಗೆ ಬಿತ್ತನೆ ಮಾಡಲು ತತ್‌ಕ್ಷಣದಲ್ಲಿ ರೂ.25ಸಾವಿರ ವಿಶೇಷ ಪರಿಹಾರ ಘೋಷಿಸಬೇಕು ಎಂದು ಬಿಜೆಪಿ ರಾ.ಪ್ರ. ಕಾರ್ಯದರ್ಶಿ, ವಿಪ ವಿರೋಧ ಪಕ್ಷದ ಮುಖ್ಯ ಸಚೇತಕ ಎನ್.ರವಿಕುಮಾರ ಆಗ್ರಹಿಸಿದರು.

ಬಿಜೆಪಿಯ ರಾಜ್ಯ ವ್ಯಾಪಿ ಬೆಳೆ ಸಮೀಕ್ಷೆ ಅಭಿಯಾನದ ಅಂಗವಾಗಿ ಮುದ್ದೇಬಿಹಾಳದಿಂದ ಆರಂಭವಾಗಿ ಕುಂಟೋಜಿ, ಮಿಣಜಗಿ, ತಾಳಿಕೋಟೆ, ಬಿಬಿ.ಇಂಗಳಗಿ, ಕೆರುಟಗಿ, ಸಿಂದಗಿ ತಾಲೂಕಿನ ಹಂದಿಗನೂರ, ಬನ್ನೆಟ್ಟಿ ಪಿ.ಎ., ಬ್ಯಾಕೋಡ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಸಮೀಕ್ಷೆ ನಡೆಸಿ, ಬಳಿಕ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ರಾಜ್ಯ ಸರ್ಕಾರ ಇದುವರೆಗೆ ಬರಪೀಡಿತ ಪ್ರದೇಶವೆಂದು ಘೋಷಿಸದೇ ಇರುವುದನ್ನು ಟೀಕಿಸಿದ ಅವರು, ಮಳೆ ಕೊರತೆಯಿಂದ ರೈತರು ಉದ್ಯೋಗ ಅರಸಿ ಗೋವಾ, ಮಹಾರಾಷ್ಟ್ರ, ಆಂಧ್ರ ಪ್ರದೇಶ ಸೇರಿದಂತೆ ವಿವಿಧ ರಾಜ್ಯಗಳಿಗೆ ವಲಸೆ ಹೋಗುತ್ತಿರುವುದು ಆತಂಕಕಾರಿ ಬೆಳವಣಿಗೆ. ರೈತರಿಗೆ ಬೆಳೆ ವಿಮೆ ಕಟ್ಟಲು ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದ್ದು, ಬೆಳೆ ವಿಮೆ ಪ್ರೀಮಿಯಂನ್ನು ಸರ್ಕಾರವೇ ಭರಿಸಬೇಕು. ರೈತರಿಗೆ ಮೋಸ ಮಾಡುತ್ತಿರುವ ವಿಮಾ ಕಂಪನಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು ಹಾಗೂ ರೈತರ ಸಾಲಮನ್ನಾ ಮಾಡಬೇಕು ಎಂದು ಆಗ್ರಹಿಸಿದ್ದಾರೆ.

ಬಿಜೆಪಿ ರೈತರ ಸಂಕಷ್ಟವನ್ನು ಅರಿಯಲು ಎಲ್ಲ ಜಿಲ್ಲೆಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ ಬೆಳೆ ಸಮೀಕ್ಷೆ ನಡೆಸುತ್ತಿರುವಾಗ, ರಾಜ್ಯ ಸರ್ಕಾರ ದೆಹಲಿಯಲ್ಲಿ ರಾಜಕೀಯ ಚಟುವಟಿಕೆಗಳಲ್ಲಿ ತೊಡಗಿದೆ ಎಂದು ಆರೋಪಿಸಿದರು. ರಾಜ್ಯ ಸರ್ಕಾರ ತಕ್ಷಣ ಬರ ಘೋಷಿಸಿ ರೈತರ ನೆರವಿಗೆ ಬರದಿದ್ದರೆ ವಿಧಾನಸಭೆ ಹಾಗೂ ವಿಧಾನ ಪರಿಷತ್ ಅಧಿವೇಶನ ಸುಗಮವಾಗಿ ನಡೆಯಲು ಬಿಜೆಪಿ ಹಾಗೂ ಜೆಡಿ-ಎಸ್ ಶಾಸಕರು ಅವಕಾಶ ನೀಡುವುದಿಲ್ಲ. ಜೊತೆಗೆ ರಾಜ್ಯಾದ್ಯಂತ ರೈತರೊಂದಿಗೆ ಉಗ್ರ ಹೋರಾಟ ಆರಂಭಿಸಲಾಗುವುದು ಎಂದು ಎಚ್ಚರಿಕೆ ನೀಡಿದರು.

ರೈತರು ಬೆಳೆ ಬಿತ್ತನೆ ಮಾಡಿದ ಬಳಿಕ ಸಮರ್ಪಕ ಮಳೆಯಾಗದೆ ಬೆಳೆ ಒಣಗುವ ಪರಿಸ್ಥಿತಿ ನಿರ್ಮಾಣವಾಗಿತ್ತು. ಇತ್ತೀಚೆಗೆ ಅಲ್ಪ ಪ್ರಮಾಣದಲ್ಲಿ ಸುರಿದ ಮಳೆಯಿಂದ ಬೆಳೆಗೆ ಜೀವ ಬಂದಿದೆಯೇ ಹೊರತು, ಇಲ್ಲದಿದ್ದರೆ ಸಂಪೂರ್ಣ ಬೆಳೆ ನಾಶವಾಗುತ್ತಿತ್ತು. ಈ ಭಾಗದಲ್ಲಿ ಹೆಚ್ಚಿನ ಪ್ರಮಾಣದಲ್ಲಿ ಹತ್ತಿ ಬಿತ್ತನೆಯಾಗಿದ್ದು, ಒಬ್ಬ ರೈತ ಎಕರೆಗೆ ಕನಿಷ್ಠ ರೂ.25 ಸಾವಿರ ಹಾಗೂ ಹೆಕ್ವೇರ್‌ಗೆ 60-70 ಸಾವಿರವರೆಗೆ ವೆಚ್ಚ ಮಾಡುತ್ತಾನೆ. ಮತ್ತೊಮ್ಮೆ ಬಿತ್ತನೆ ಮಾಡುವುದು ರೈತನಿಗೆ ಅಸಾಧ್ಯವಾಗಿದ್ದು, ಸರ್ಕಾರ ತಕ್ಷಣ ನೆರವಿಗೆ ಬರಬೇಕಾಗಿದೆ ಎಂದು ಒತ್ತಾಯಿಸಿದರು. ಈ ವೇಳೆ ಮಾಜಿ ಶಾಸಕ, ರೈತ ಮೋರ್ಚಾ ರಾಜ್ಯಾಧ್ಯಕ್ಷ ಎ.ಎಸ್.ಪಾಟೀಲ ನಡಹಳ್ಳಿ ಮಾತನಾಡಿದರು.

ಈ ಸಂದರ್ಭದಲ್ಲಿ ರಾಯಭಾಗ ಶಾಸಕ ದುರ್ಯೋಧನ ಐಹೊಳೆ, ಹಣಮಂತ ನಿರಾಣಿ, ಮಾಜಿ ಶಾಸಕ ರಮೇಶ ಭೂಸನೂರ, ಸೋಮನಗೌಡ ಪಾಟೀಲ, ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ, ನಾಗಪ್ಪ ಶಿರೂರ ಈರಣ್ಣ ರಾವೂರ, ಸಿದ್ದು ಬುಳ್ಳಾ, ತಾಲೂಕಾಧ್ಯಕ್ಷ ಸಂತೋಷ ಪಾಟೀಲ ಡಂಬಳ, ರೈತ ಮೋರ್ಚಾ ಅಧ್ಯಕ್ಷ ಪೀರೂ ಕೆರೂರ, ಶ್ರೀಶೈಲಗೌಡ ಬಿರಾದಾರ ಮಾಗಣಗೇರಿ ಸೇರಿದಂತೆ ಬಿಜೆಪಿ ಪಕ್ಷದ ಪದಾಧಿಕಾರಿಗಳು, ಮುಖಂಡರು ಹಾಗೂ ಕಾರ್ಯಕರ್ತರು ಇದ್ದರು.

## ವಿಜಯಪುರದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶ ಅರವಿಂದ ಹಾಗರಗಿ ಅಭಿಮತ

# ಬಂದಿಗಳಿಗೆ ಔದ್ಯೋಗಿಕ ತರಬೇತಿ ಅವಶ್ಯಕ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಕಾರಾಗೃಹ ಬಂದಿಗಳಿಗೆ ಔದ್ಯೋಗಿಕ ತರಬೇತಿ ನೀಡುವುದು ತುಂಬಾ ಸಂತೋಷದ ವಿಷಯ. ಬಿಡುಗಡೆ ಹೊಂದಿದ ನಂತರ ಅವರ ಆರ್ಥಿಕ ಸದೃಡತೆಗೆ ಇದು ಸಹಾಯಕಾರಿಯಾಗಲಿದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ ಹೇಳಿದರು. ಕಾರಾಗೃಹ ಮತ್ತು ಸುಧಾರಣಾ ಸೇವೆ ಇಲಾಖೆ ಹಾಗೂ ಜಿಲ್ಲಾ ಕೌಶಲ್ಯಾಭಿವೃದ್ಧಿ ಇಲಾಖೆ ಸಹಯೋಗದಲ್ಲಿ ಕಾರಾಗೃಹದ ಪುರುಷ ಬಂದಿಗಳಿಗೆ ಕಂಪ್ಯೂಟರ್ ಹಾಗೂ ತಾಂತ್ರಿಕ ಸೇವಾ ತರಬೇತಿ ಹಾಗೂ ಮಹಿಳಾ ಬಂದಿಗಳಿಗೆ ಸಾಂಪ್ರದಾಯಿಕ ಕೈಕಸೂತಿ ಮತ್ತು ಡಿಸೈನಿಂಗ್ ಔದ್ಯೋಗಿಕತರಬೇತಿ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇತ್ತೀಚಿನ ದಿನಗಳಲ್ಲಿ ಕಂಪ್ಯೂಟರ್ ಬಳಕೆ ಅತೀ ಅಗತ್ಯವಾದ ತಂತ್ರಜ್ಞಾನವಾಗಿದೆ. ಹಾಗಾಗಿ ಈ ತರಬೇತಿಯನ್ನು ಸಮಯ ವ್ಯರ್ಥ ಮಾಡದೇ ದಕ್ಷತೆಯಿಂದ ಕಲಿತು ಸದುಪಯೋಗಪಡಿಸಿಕೊಳ್ಳಬೇಕು ಎಂದರು.

ಕಾರಾಗೃಹ ಅಧೀಕ್ಷಕರಾದ ಮಲ್ಲಿಕಾರ್ಜುನ ಎಸ್ ಮಾಳಿ ಅಧ್ಯಕ್ಷತೆ ವಹಿಸಿ, ಇದು ಕೇವಲ ಕಾರಾಗೃಹ ಮಾತ್ರವಲ್ಲ. ಇದು ಸುಧಾರಣಾ ಕೇಂದ್ರ, ಬಂದಿಗಳಲ್ಲಿ ಪರಿವರ್ತನೆಯನ್ನು ತರುವ ಪರಿವರ್ತನಾ ನಿಲಯವಾಗಿದೆ. ಆ ನಿಟ್ಟಿನಲ್ಲಿ ಬಂದಿಗಳಿಗೆ ಪ್ರತಿದಿನ ಯೋಗ, ಧ್ಯಾನ ಪ್ರಾಣಾಯಾಮ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ. ಜೊತೆಗೆ ಔದ್ಯೋಗಿಕ ತರಬೇತಿ ನೀಡಿ ಸಮಾಜದ ಮುಖ್ಯ ವಾಹಿನಿಗೆ ಕಳುಹಿಸಲು ಇಲಾಖೆ ಶ್ರಮಿಸುತ್ತಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧಿಕಾರಿ, ಸಿಬ್ಬಂದಿಗಳು, ಹೈಟೆಕ್ ಕಂಪ್ಯೂಟರ್ ತರಬೇತಿ ಕೇಂದ್ರದ ಮುಖ್ಯಸ್ಥರಾದ ಸುಭಾಷ, ಮತ್ತಿತರರು ಇದ್ದರು. ಡಿ. ಎಸ್. ದೀಕ್ಷಿತ್ ನಿರೂಪಿಸಿ, ವಂದಿಸಿದರು.

## ಶಾಲಾವರಣದಲ್ಲಿ ತಂಬಾಕು ಉತ್ಪನ್ನ ನಿಷೇಧ । ದಿಢೀರ್ ದಾಳಿ ನಡೆಸಿ ಬಿಗಿ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ. ಆನಂದ ಕೆ. ಅಧಿಕಾರಿಗಳಿಗೆ ಸೂಚನೆ

# ಕೋಟ್ಪಾ ಕಾಯ್ದೆ ಪರಿಣಾಮಕಾರಿ ಜಾರಿಗೆ ಅಗತ್ಯ ಕ್ರಮ



■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮಕ್ಕಳ ಭವಿಷ್ಯದ ದೃಷ್ಟಿಯಿಂದ ಪ್ರತಿ ಶಾಲಾ ಆವರಣದಿಂದ ಒಂದು ನೂರು ಮೀಟರ್ ಒಳಗಡೆ ತಂಬಾಕು ಉತ್ಪನ್ನಗಳನ್ನು ಮಾರಾಟ ಮಾಡುವಂತಿಲ್ಲ. ಹಾಗಾಗಿ ಶಾಲಾ ಶಿಕ್ಷಣ ಇಲಾಖೆ ಕೋಟ್ಪ ಕಾಯ್ದೆ ಪರಿಣಾಮಕಾರಿ ಜಾರಿಗೆ ಕ್ರಮವಹಿಸಬೇಕು. ಈ ಕಾಯ್ದೆ ಪರಿಣಾಮಕಾರಿ ಅನುಷ್ಠಾನಕ್ಕಾಗಿ ಸಮಿತಿ ಕಾಲ-ಕಾಲಕ್ಕೆ ದಿಢೀರ್ ದಾಳಿ ನಡೆಸಿ ಬಿಗಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಸೂಚಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಮಾದಕ ವಸ್ತು ನಿಯಂತ್ರಣ ಕುರಿತ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕೋಟ್ಪಾ ಕಾಯ್ದೆಯ ಪರಿಣಾಮಕಾರಿ ಅನುಷ್ಠಾನಕ್ಕೆ ಶಾಲಾ ಆವರಣದ ತಾಲೂಕು ಸಮಿತಿಗೆ ದೂರು ಬಂದ ತಕ್ಷಣ ಕ್ರಮವಹಿಸಿ,ಶಾಲಾ ಅಭಿವೃದ್ಧಿ ಸಮಿತಿ ಒಳಗೊಂಡಂತೆ ಶಾಲಾ ಶಿಕ್ಷಕರಿಗೆ, ಅಂಗನವಾಡಿ ಹಾಗೂ ಆಶಾ ಕಾರ್ಯಕರ್ತೆಯರ ಈ ಮಾಹಿತಿ ನೀಡಬೇಕು. ಸಾಧ್ಯವಿದ್ದರೆ ಪೊಲೀಸ್ ಇಲಾಖೆಯ ಸಹಾಯ ಪಡೆದುಕೊಂಡರೆ, ಈ ಕಾಯ್ದೆಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಕ್ಕೆ ತರುವುದರಲ್ಲಿ ಯಾವುದೇ ಅನುಮಾನವಿಲ್ಲ ಎಂದರು.

ಮಾದಕ ವಸ್ತು ನಿಯಂತ್ರಣ ಸಮಿತಿಯು ಆಗಾಗ ಸಭೆ ಸೇರಿ ಜಾಗೃತಿ ಮೂಡಿಸಬೇಕು. ಮಾದಕ ವಸ್ತು ನಿಯಂತ್ರಣದ ಬಗ್ಗೆಯೂ ವ್ಯಾಪಕ ಪ್ರಚಾರ ಮಾಡಿ ಸಾರ್ವಜನಿಕರಿಗೆ ಈ ಕುರಿತು ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಬೇಕು ಎಂದು ಹೇಳಿದರು.

ಇಲಾಖೆಗಳಿಗೆ ಕಟ್ಟುನಿಟ್ಟಿನ ಸೂಚನೆ: ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ನಿರ್ದೇಶನದಂತೆ ಜಿಲ್ಲೆಯಲ್ಲಿ ಮಾದಕ ದ್ರವ್ಯಗಳ ಸಂಪೂರ್ಣ ನಿರ್ಮೂಲನೆಗೆ ವ್ಯಾಪಕ ಜಾಗೃತಿ ಕಾರ್ಯಕ್ರಮ ನಡೆಸಿ.

ವಿವಿಧ ಇಲಾಖೆಗಳ ಸಮನ್ವಯದೊಂದಿಗೆ ಜಂಟಿ ಕಾರ್ಯಾಚರಣೆ ನಡೆಸಬೇಕು ಎಂದು ಜಿಲ್ಲಾಧಿಕಾರಿಗಳು ವಿವಿಧ ಇಲಾಖೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು. ಅರಣ್ಯ ವ್ಯಾಪ್ತಿಯೊಳಗೆ ಗಾಂಜಾ ಗಿಡಗಳನ್ನು ಬೆಳೆಯುವುದು ಅಥ-ವಾ ಸಾಗಾಣಿಕೆ ಮಾಡುವುದು ಕಂಡುಬಂದಲ್ಲಿ ತಕ್ಷಣವೇ ಸಂಬಂಧಪಟ್ಟ ಪೊಲೀಸ್ ಠಾಣೆಗೆ ಮಾಹಿತಿ ನೀಡುವಂತೆ ಉಪ ಅರಣ್ಯ ಸಂರಕ್ಷಣಾ ಇಲಾಖೆಯ ಅಧಿಕಾರಿಗಳಿಗೆ ಸೂಚಿಸಲಾಯಿತು.

ಔಷಧ ನಿಯಂತ್ರಣ ಇಲಾಖೆಯು ಮಾದಕ ಅಂಶವುಳ್ಳ ಔಷಧಗಳನ್ನು ವೈದ್ಯರ ಅಧಿಕೃತ ಚೀಟಿ ಇಲ್ಲದೆ ಮಾರಾಟ ಮಾಡದಂತೆ ಔಷಧ ಮಳಿಗೆಗಳ ಮೇಲೆ ಕಟ್ಟುನಿಟ್ಟಿನ ನಿಗಾ ವಹಿಸುತ್ತಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಪ್ರೊಬೆಷನರ್ ಐಎಎಸ್ ಅಧಿಕಾರಿ ಅಭಿಷೇಕ ಸೇಹರ್, ಇಂಡಿ ಉಪ ವಿಭಾಗಾಧಿಕಾರಿಗಳಾದ ಚಿದಾನಂದ ಗುರುಸ್ವಾಮಿ, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಲ್ಲನಗೌಡ ಬಿರಾದಾರ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಮಲ್ಲಿಕಾರ್ಜುನ ಕುಸನಾಳ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಿಂ ಬಾಬಾ ಮುದ್ದೇಬಿಹಾಳ, ಅಬಕಾರಿ ಉಪ ಆಯುಕ್ತ ಮುರಳೀಧರ್, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕ ಮಹೇಶ ಪೋತದಾರ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ಸೇರಿದಂತೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಿಬ್ಬಂದಿ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಉಪಸ್ಥಿತರಿದ್ದರು.

### ಪ್ರಕರಣ ದಾಖಲು ಸಂಖ್ಯೆಯಲ್ಲಿ ಗಣನೀಯ ಹೆಚ್ಚಳ

ಕಳೆದ ಮೂರು ವರ್ಷಗಳಲ್ಲಿ ಪೊಲೀಸ್ ಇಲಾಖೆಯು ಎನ್.ಡಿ.ಪಿ.ಎಸ್ ಕಾಯ್ದೆಯಡಿ ಕಟ್ಟುನಿಟ್ಟಿನ ಕ್ರಮ ಕೈಗೊಂಡಿದ್ದು, ಮಾದಕ ದ್ರವ್ಯ ಮಾರಾಟ ಮತ್ತು ಸಾಗಾಣಿಕೆ ವಿರುದ್ಧ ದಾಖಲಾದ ಪ್ರಕರಣಗಳ ಸಂಖ್ಯೆಯಲ್ಲಿ ಗಣನೀಯ ಹೆಚ್ಚಳವಾಗಿದೆ. 2024 ರಲ್ಲಿ ಒಟ್ಟು 28 ಪ್ರಕರಣಗಳನ್ನು ದಾಖಲಿಸಿ 297 ಕೆಜಿ 872 ಗ್ರಾಂ ಗಾಂಜಾ ಹಾಗೂ 373 ಕೆಜಿ 574 ಗ್ರಾಂ ಮಾದಕ ದ್ರವ್ಯಗಳನ್ನು ವಶಪಡಿಸಿಕೊಳ್ಳಲಾಗಿತ್ತು. 2025 ರಲ್ಲಿ ಪ್ರಕರಣಗಳ ಸಂಖ್ಯೆ 36ಕ್ಕೆ ಏರಿಕೆಯಾಗಿದ್ದು, ಈ ಅವಧಿಯಲ್ಲಿ 342 ಕೆಜಿ 537 ಗ್ರಾಂ ಗಾಂಜಾ, 302 ಕೆಜಿ 24 ಗ್ರಾಂ ಗಾಂಜಾ ಹಾಗೂ 18 ಕೆಜಿ 432 ಗ್ರಾಂ ಅಫೀಮು ಜಪ್ತಿ ಮಾಡಲಾಗಿತ್ತು. ಪ್ರಸ್ತುತ 2026 ರಲ್ಲಿ ದಾಖಲಾದ ಪ್ರಕರಣಗಳ ಸಂಖ್ಯೆ 45ಕ್ಕೇರಿದ್ದು, 121 ಕೆಜಿ 69 ಗ್ರಾಂ ಗಾಂಜಾ ಮತ್ತು 345.822 ಕೆಜಿ ಮಾದಕ ದ್ರವ್ಯಗಳನ್ನು ಜಪ್ತಿ ಮಾಡುವ ಮೂಲಕ ಕಾನೂನು ಕ್ರಮ ಜರುಗಿಸಲಾಗಿದೆ ಎಂದರು.

### ಜಾಗೃತಿ ಮೂಡಿಸಲು ಸೂಚನೆ

ವ್ಯಸನ ಮುಕ್ತ ಜೀವನ ನಡೆಸಲು ಶಾಲಾ-ಕಾಲೇಜ್ ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಬೇಕು. ಯುವಕರು ವ್ಯಸನದಿಂದ ಮುಕ್ತರಾಗಿ ಉತ್ತಮ ಜೀವನ ನಡೆಸಬೇಕು. ಈ ನಿಟ್ಟಿನಲ್ಲಿ ಮಾದಕ ವ್ಯಸನಕ್ಕೆ ಒಳಗಾಗದಂತೆ ಮಾದಕ ವಸ್ತು ಸೇವನೆಯಿಂದಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಈ ಕುರಿತು ಸಂಬಂಧಿಸಿದ ಇಲಾಖಾಧಿಕಾರಿಗಳು ಪರಸ್ಪರ ಸಮನ್ವಯ ಹಾಗೂ ಸಹಕಾರದಿಂದ ಕಾರ್ಯನಿರ್ವಹಿಸುವಂತೆ ಜಿಲ್ಲಾಧಿಕಾರಿಗಳು ಅಧಿಕಾರಿಗಳಿಗೆ ಸೂಚನೆ ನೀಡಿದರು.



# ಗುರುಗಳ ಮಾರ್ಗದರ್ಶನ, ಸತತ ಅಭ್ಯಾಸದಿಂದ ಸಾಧನೆ ಸಾಧ್ಯ :ಮುನ್ನೊಳ್ಳಿ

■ ಉದಯರಶ್ಮಿ ದಿನಪತ್ರಿಕೆ

ಅಥಣಿ: ಗುರುಗಳ ಮಾರ್ಗದರ್ಶನದಿಂದ ಸತತವಾಗಿ ಅಭ್ಯಾಸದಿಂದ ಮುಂದೆ ಜೀವನದಲ್ಲಿ ಒಂದು ಸಾಧನೆ ಮಾಡಬಹುದು ಎಂದು ಅಥಣಿ ಪೊಲೀಸ ಅಧಿಕಾರಿ ಡಿವೈಎಸ್ಪಿ ಪ್ರಶಾಂತ ಮುನ್ನೊಳ್ಳಿ ಮಾತನಾಡಿದರು.

ಅವರು ಗುಂಡೇವಾಡಿ ಗ್ರಾಮದ ಸರ್ವೋದಯ ಶಿಕ್ಷಣ ಸಂಸ್ಥೆ ವತಿಯಿಂದ ಸರ್ವೋದಯ ಸ್ವತಂತ್ರ ಪದವಿ ಪೂರ್ವ ಕಲಾ ಮತ್ತು ವಾಣಿಜ್ಯ ಮಹಾವಿದ್ಯಾಲಯಲ್ಲಿ ಸಂಸ್ಕೃತಿ ಮತ್ತು ಕ್ರೀಡಾ ಚಟುವಟಿಕೆ ಉದ್ಘಾಟನೆ ಮತ್ತು ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಕಾರ್ಯಕ್ರಮದಲ್ಲಿ ಉದ್ಘಾಟನೆ ಮಾಡಿ ಮಾತನಾಡಿದರು. ಶಾಲೆಯಲ್ಲಿ ಕಡಿಮೆ ಅಂಕ ಹಾಗೂ ಭಾಷೆ ಮುಖ್ಯವಲ್ಲ ನಾವು ಒಂದು ನಿರ್ಧಿಷ್ಟವಾದ ಗುರಿ ಹಾಗೂ ಸತತವಾಗಿ ಅಭ್ಯಾಸ ಮಾಡಿದರೆ ಇಟ್ಟ ಗುರಿ ಮುಟ್ಟಲ್ಲೂ ಸಾಧ್ಯವಾಗುತ್ತದೆ ಎಂದರು. ಈ ಕಾರ್ಯಕ್ರಮದಲ್ಲಿ ಅಥ-ಣಿ ಪುರಸಭೆ ಮುಖ್ಯಾಧಿಕಾರಿ ಅಶೋಕ ಗುಡಮನಿ ಮಾತನಾಡಿ ಗುರುವಿನ ಸ್ಥಾನ ಬಹಳ ಮಹತ್ವವಾಗಿದೆ, ಗುರುಗಳು ಒಂದು ಕಾರ್ಖಾನೆ ಇದ್ದ ಹಾಗೆ, ಗುರುಗಳ ಮಾತು ಹೇಳಿದ ಪಾಲನೆ ಯಾರು ಮಾಡುತ್ತಾರೆ ಅವರು ಜೀವನದಲ್ಲಿ ಸಾಧನೆ ಮಾಡಬಹುದು.

ವಿದ್ಯಾರ್ಥಿಗಳು ಗುರುವಿನ ಬಗ್ಗೆ ತಂದೆ ತಾಯಿ ಬಗ್ಗೆ ಗೌರವ, ಪ್ರೀತಿ ಯಾರು ಅಳವಡಿಸಿಕೊಂಡರೆ ಒಳ್ಳೆ ಮನುಷ್ಯರಾಗಿ ಬದುಕಬಹುದು. ಜೀವನದಲ್ಲಿ ಸಾಧನೆ ಮಾಡಬೇಕಾದರೆ ಬಡತನ ಅಡ್ಡಿ ಬರುವುದಿಲ್ಲ ಕಷ್ಟ ಪಟ್ಟು ಓದಿದರೆ ಗುರಿ ಮುಟ್ಟಬಹುದು ಎಂದು ವಿದ್ಯಾರ್ಥಿಗಳಿಗೆ ಹೇಳಿದರು.

ಅಥಣಿ ವೈದ್ಯರಾದ ಡಾ ಆನಂದ ಗುಂ-ಜಿಗಾಂವಿ ಹಾಗೂ ಶಿಕ್ಷಕರಾದ ಬಾಬು ಗುರವ ಮಾತನಾಡಿದರು.

ಈ ವೇಳೆಯಲ್ಲಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮೀತಿ ಸಂಚಾಲಕ ರವಿ ಕಾಂಬಳೆ, ತಾಲೂಕಾ ಪಂಚಾಯತ ಮಾಜಿ ಸದಸ್ಯ ಚಂದ್ರಕಾಂತ ಗೊಂಧಳಿ , ಗ್ರಾಮದ ಯುವ ಮುಖಂಡ ವಿಶ್ವಾನಾಥ ಪಾಟೀಲ, ರಾವಸಾಬ ಕಾರಾಜನಗಿ, ಜಾವಿದ್ ಮುಜಾವರ, ಅಜೀತ ಬನಜವಾಡ, ಶೇಕರ ಕಾರಾಜನಗಿ, ಕದಂ ಸರ್, ಸಿಬ್ಬಂದಿಗಳು ಹಾಗೂ ವಿದ್ಯಾರ್ಥಿಗಳು ಇದ್ದರು

## ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶಂಕರಗೌಡ ಪಾಟೀಲ ಆಗ್ರಹ

# ನಿಂಬೆಹಣ್ಣು ಮಾರಾಟದಲ್ಲಿ ರೈತರಿಗಾಗುತ್ತಿರುವ ಅನ್ಯಾಯ ತಪ್ಪಿಸಿ

■ ಉದಯರಶ್ಮಿ ದಿನಪತ್ರಿಕೆ



ಇಂಡಿ: ಜಿಲ್ಲೆಯ ಪ್ರಮುಖ ವಾಣಿಜ್ಯ ಬೆಳೆಯಾದ ನಿಂಬೆಹಣ್ಣು ಮಾರಾಟ ವ್ಯವಸ್ಥೆಯಲ್ಲಿ ರೈತರಿಗೆ ಆಗುತ್ತಿರುವ ಅನ್ಯಾಯವನ್ನು ತಪ್ಪಿಸಲು, ಇಂಡಿ ಭಾಗದಲ್ಲೂ ಎಪಿಎಂಸಿ ಮುಖಾಂತರವೇ ಅಧಿಕೃತ ವ್ಯಾಪಾರ ನಡೆಯಬೇಕು ಎಂದು ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಶಂಕರಗೌಡ ಪಾಟೀಲ ಆಗ್ರಹಿಸಿದ್ದಾರೆ.

ಮಂಗಳವಾರ ನಗರದ ಖಾಸಗಿ ಹೋಟೆಲ್ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ವಿಜಯಪುರ ನಗರದಲ್ಲಿ ಸುಸಜ್ಜಿತ ಎಪಿಎಂಸಿ ಮಾರುಕಟ್ಟೆ ವ್ಯವಸ್ಥೆ ಇರುವಂತೆ, ಇಂಡಿ ತಾಲೂಕಿನಲ್ಲೂ ತಕ್ಷಣವೇ ಇಂತಹದ್ದೇ ಪಾರದರ್ಶಕ ವ್ಯವಸ್ಥೆ ಜಾರಿಗೆ ಬರಬೇಕು ಎಂದು ಒತ್ತಾಯಿಸಿದರು.

ಜಿಲ್ಲೆಯಲ್ಲಿ ನಿಂಬೆಹಣ್ಣು ವ್ಯಾಪಾರಕ್ಕೆ ಸಂಬಂಧಿಸಿದಂತೆ ಸದ್ಯ ಎರಡು ರೀತಿಯ ಭಿನ್ನ ಚಿತ್ರಣಗಳು ಕಂಡುಬರುತ್ತಿವೆ. ವಿಜಯಪುರ ನಗರದ ಎಪಿಎಂಸಿ ಆವರಣದಲ್ಲಿಯೇ ನಿಂಬೆಹಣ್ಣು ಮಾರಾಟ ಪ್ರಕ್ರಿಯೆ ವ್ಯವಸ್ಥಿತವಾಗಿ ನಡೆಯುತ್ತದೆ. ಇಲ್ಲಿ ಮುಕ್ತ ಹರಾಜು ಪ್ರಕ್ರಿಯೆ ಇರುವುದರಿಂದ ರೈತರಿಗೆ ಸ್ಪರ್ಧಾತ್ಮಕ ಬೆಲೆ ಸಿಗುತ್ತಿದೆ ಆದರೆ, ಅತಿ ಹೆಚ್ಚು ನಿಂಬೆಹಣ್ಣು ಬೆಳೆಯುವ ಇಂಡಿ ಭಾಗದಲ್ಲಿ ಇಂತಹ ಯಾವುದೇ ಸರ್ಕಾರಿ ನಿಯಂತ್ರಿತ ವ್ಯವಸ್ಥೆ ಇಲ್ಲ. ಇದರಿಂದಾಗಿ ರೈತರು ಪ್ರತಿ ಹಂತದಲ್ಲೂ ಶೋಷಣೆಗೆ ಒಳಗಾಗುತ್ತಿದ್ದಾರೆ.

ತಾಲೂಕಿನಲ್ಲಿ ಅಧಿಕೃತ ಎಪಿಎಂಸಿ ಮಾರುಕಟ್ಟೆ ಸಕ್ರಿಯವಾಗಿಲ್ಲದೇ ಇರುವುದನ್ನು ಬಂಡವಾಳ ಮಾಡಿಕೊಂಡಿರುವ ಮಧ್ಯವರ್ತಿಗಳು, ತಮ್ಮದೇ ಆದ ದಲ್ಲಾಳಿ ಸಾಮ್ರಾಜ್ಯವನ್ನು ಸೃಷ್ಟಿಸಿಕೊಂಡಿದ್ದಾರೆ. ಮಧ್ಯವರ್ತಿಗಳು ರೈತ-ರಿಂದ ನೇರವಾಗಿ ಮತ್ತು ತಮಗೆ ಇಷ್ಟಬಂದ ದರಕ್ಕೆ ನಿಂಬೆಹಣ್ಣು ಖರೀದಿ ಮಾಡುತ್ತಿದ್ದಾರೆ ಎಂದು ಆರೋಪಿಸಿದರು.

ಮಾರುಕಟ್ಟೆಯ ನೈಜ ದರದ ಮಾಹಿತಿ ಇಲ್ಲದೆ, ರೈತರು ದಲ್ಲಾಳಿಗಳು ನಿಗದಿಪಡಿಸಿದ ಅತ್ಯಲ್ಪ ಬೆಲೆಗೇ ಕಷ್ಟಪಟ್ಟು ಬೆಳೆದ ಬೆಳೆಯನ್ನು ಮಾರಬೇಕಾದ ಅನಿವಾರ್ಯತೆ ಇದೆ.

ರೈತರಿಂದ ಕಡಿಮೆ ಬೆಲೆಗೆ ಖರೀದಿಸಿದ ನಿಂಬೆಹಣ್ಣನ್ನು ಈ ಮಧ್ಯವರ್ತಿಗಳು ಹೊರರಾಜ್ಯ ಹಾಗೂ ಕರಾವಳಿ ಭಾಗಗಳಿಗೆ ನೇರವಾಗಿ ಸರಬರಾಜು ಮಾಡಿ ತಾವೇ ಕೋಟ್ಯಂತರ ರೂಪಾಯಿ ಲಾಭ ಮಾಡಿಕೊಳ್ಳುತ್ತಿದ್ದಾರೆ. ರೈತರ ಬೆವರಿನ ಹನಿಗೆ ನ್ಯಾಯ ಸಿಗಬೇಕು ಎಂದು ಪ್ರತಿಪಾದಿಸಿರುವ ಶಂಕರಗೌಡ ಪಾಟೀಲ ಅವರು ಸರ್ಕಾರ ಮತ್ತು ಕೃಷಿ ಮಾರಾಟ ಮಂಡಳಿಗೆ ಮನವಿ ಮಾಡಿ ಇಂಡಿಯಲ್ಲಿ ತಕ್ಷಣವೇ ಇಂಡಿ ಎಪಿಎಂಸಿ ಆವರಣದಲ್ಲಿ ನಿಂಬೆಹಣ್ಣು ಖರೀದಿಗೆ ಪ್ರತ್ಯೇಕ ಮತ್ತು ಸುಸಜ್ಜಿತ ವ್ಯವಸ್ಥೆ ಕಲ್ಪಿಸಬೇಕು, ಎಪಿಎಂಸಿ ಆವರಣದ ಹೊರಗೆ ನಡೆಯುವ ಅನಧಿಕೃತ, ರಹಸ್ಯ ಖರೀದಿ ಪ್ರಕ್ರಿಯೆಯನ್ನು ಕಾನೂನುಬಾಹಿರ ಎಂದು ಘೋಷಿಸಿ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು.ವಿ-ಜಯಪುರ ಮಾದರಿಯಲ್ಲೇ ಇಂಡಿಯಲ್ಲೂ ಮುಕ್ತ ತೂಕ ಮತ್ತು ಬಹಿರಂಗ ಹರಾಜು ಪ್ರಕ್ರಿಯೆ ಆರಂಭಿಸಬೇಕು. ಇದರಿಂದ ರೈತರಿಗೆ ಸೂಕ್ತ ತೂಕ ಮತ್ತು ನ್ಯಾಯಯುತ ಬೆಲೆ ಸಿಗುತ್ತದೆ ಎಂದು ಶಂಕರಗೌಡರು ತಿಳಿಸಿದರು.

# ಉತ್ತಮ ಸಮಾಜ ನಿರ್ಮಾಣದಲ್ಲಿ ಗುರುವಿನ ಪಾತ್ರ ಅನನ್ಯ :ಡಾ.ರಾಜಾಗೌಡ

■ ಉದಯರಶ್ಮಿ ದಿನಪತ್ರಿಕೆ



ಬಾಗಲಕೋಟೆ (ಜಮಖಂಡಿ): ಸಮಾಜದ ಭವಿಷ್ಯವನ್ನು ರೂಪಿಸುವ ಶಿಲ್ಪಿಗಳೆಂದರೆ ಗುರುಗಳು. ಶಿಕ್ಷಣವು ಕೇವಲ ಅಕ್ಷರಜ್ಞಾನಕ್ಕೆ ಸೀಮಿತವಾಗದೆ, ಉತ್ತಮ ವ್ಯಕ್ತಿತ್ವ, ಸಂಸ್ಕಾರ, ಮಾನವೀಯ ಮೌಲ್ಯಗಳು ಹಾಗೂ ಸಾಮಾಜಿ-ಕ ಹೊಣೆಗಾರಿಕೆಯನ್ನು ಬೆಳೆಸುವ ಶಕ್ತಿಯಾಗಿದೆ ಎಂದು ಬಿ.ಎಲ್.ಡಿ.ಇ. ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ (ಬಿ.ಇಡಿ) ಪ್ರಾಚಾರ್ಯ ಡಾ. ರಾಜಾಗೌಡ ಕಾಗವಾಡೆ ಹೇಳಿದರು.

ನಗರದ ಬಿ.ಎಲ್.ಡಿ.ಇ. ಶಿಕ್ಷಣ ಮಹಾವಿದ್ಯಾಲಯದಲ್ಲಿ ಬುಧವಾರ ಆಯೋಜಿಸಿದ್ದ ಗುರು ಪೂರ್ಣಿಮಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, "ಗುರು ಎಂದರೆ ಕೇವಲ ಪಾಠ ಕಲಿಸುವ ವ್ಯಕ್ತಿಯಲ್ಲ. ಜೀವನದ ಪ್ರತಿಯೊಂದು ಹಂತದಲ್ಲೂ ಮಾರ್ಗದರ್ಶನ ನೀಡುವ ತಂದೆ-ತಾಯಿ, ಬಂಧು-ಬಳಗ, ನೆರೆಹೊರೆಯವರು ಹಾಗೂ ಸಮಾಜದ ಹಿರಿಯರೂ ನಮ್ಮ ಗುರುಗಳೇ. ಇಂತಹ ಗುರುಗಳ ಮಾರ್ಗದರ್ಶನವೇ ಸುಸಂಸ್ಕೃತ ಸಮಾಜ ನಿರ್ಮಾಣ-ಕ್ಕೆ ಬುನಾದಿಯಾಗುತ್ತದೆ" ಎಂದು ಹೇಳಿದರು. ಗುರು-ಶಿಷ್ಯ ಪರಂಪರೆಯು ಭಾರತೀಯ ಸಂಸ್ಕೃತಿಯ ಅಮೂಲ್ಯ ಪರಂಪರೆ ಯಾಗಿದ್ದು, ಇಂದಿನ ತಂತ್ರಜ್ಞಾನ ಯುಗದಲ್ಲಿಯೂ ಅದರ ಮಹತ್ವ ಕಡಿಮೆಯಾಗಿಲ್ಲ. ಶಿಕ್ಷಣದ ಜೊತೆಗೆ ಜೀವನ ಮೌಲ್ಯಗಳನ್ನು ವಿದ್ಯಾರ್ಥಿಗಳಲ್ಲಿ ಬೆಳೆಸುವ ಹೊಣೆಗಾರಿಕೆ ಶಿಕ್ಷಕರ ಮೇಲಿದೆ. ಗುರುಗಳಿಗೆ ಗೌರವ ಸಲ್ಲಿಸುವ ಸಂಸ್ಕೃತಿ ಪ್ರತಿಯೊಬ್ಬ ವಿದ್ಯಾರ್ಥಿಯಲ್ಲೂ ಬೆಳೆಯಬೇಕು ಎಂದು ಅವರು ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಶಿಕ್ಷಣಾರ್ಥಿಗಳಾದ ವಿಜಯಲಕ್ಷ್ಮಿ ಯಾದವಾಡ, ರವಿ ಗುಗ್ರಿ, ದುಂಡಪ್ಪ ಡಬರಿ ಹಾಗೂ ಅಲ್ಲಮಪ್ರಭು ವಾಜಂತ್ರಿ ಗುರುಗಳ ಕುರಿತು ತಮ್ಮ ಅನುಭವ, ಕೃತಜ್ಞತೆ ಹಾಗೂ ಅನಿಸಿಕೆಗಳನ್ನು ಹಂಚಿಕೊಂಡರು. ಗುರು-ಶಿಷ್ಯರ ಬಾಂಧವ್ಯ, ಶಿಕ್ಷಣದ ಮಹತ್ವ ಹಾಗೂ ಜೀವನ ಮೌಲ್ಯಗಳ ಕುರಿತು ನಡೆದ ವಿಚಾರ ವಿನಿಮಯ ಕಾರ್ಯಕ್ರಮಕ್ಕೆ ವಿಶೇಷ ಮೆರುಗು ನೀಡಿತು. ಕಾರ್ಯಕ್ರಮದಲ್ಲಿ ಉಪನ್ಯಾಸಕ ವೃಂದ ಹಾಗೂ ಪ್ರಶಿಕ್ಷಣಾರ್ಥಿಗಳು ಉಪಸ್ಥಿತ-ರಿದ್ದರು. ಪ್ರಶಿಕ್ಷಣಾರ್ಥಿಗಳಾದ ಮಧು ಮಠಪತಿ ಮತ್ತು ಶ್ವೇತ ಗುಜಗೊಂಡ ಪ್ರಾರ್ಥಿಸಿದರು. ಶ್ರೇಯಾ ಚೌಹಾಣ್ ಸ್ವಾಗತಿಸಿದರು. ರಂಜಾನ್ ಪಿಂಜಾರ್ ಹಾಗೂ ಸೃಷ್ಟಿಸಿಂಧೂರ ಕಾರ್ಯಕ್ರಮ ನಿರೂಪಿಸಿದರು. ಮಹಾನಂದ ತೇಲಿ ವಂದನಾರ್ಪಣೆ ಸಲ್ಲಿಸಿದರು.

# ಕೃಷ್ಣಾ ನದಿಯನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ :ಬೆಳ್ಳುಬ್ಬಿ

■ ಉದಯರಶ್ಮಿ ದಿನಪತ್ರಿಕೆ



ಕೊಲ್ಹಾರ: ಅವಳಿ ಜಿಲ್ಲೆಯ ನೂರಾರು ರೈತರು ಹಾಗೂ ರೈತ ಮಹಿಳೆಯರು ಮಾಜಿ ಸಚಿವ ಎಸ್.ಕೆ. ಬೆಳ್ಳುಬ್ಬಿ ಅವರ ನೇತೃತ್ವದಲ್ಲಿ ಮಹಾರಾಷ್ಟ್ರದ ಸಾತಾರ ಜಿಲ್ಲೆಯ ಮಹಾಬಳೇಶ್ವರದಲ್ಲಿರುವ ಪವಿತ್ರ ಪಂಚಗಂಗಾ ಕ್ಷೇತ್ರದಲ್ಲಿ ಗಂಗಾಪೂಜೆಯನ್ನು ಭಕ್ತಿ ಭಾವದಿಂದ ನೆರವೇರಿಸಿದರು.

ಪಂಚಗಂಗಾ ತೀರ್ಥದಲ್ಲಿ ಜಲದೇವತೆಗೆ ಬಾಗೀನ ಅರ್ಪಿಸಿ, ಉದ್ಭವಲಿಂಗ ಹಾಗೂ ಶ್ರೀ ಕೃಷ್ಣನ ಮೂರ್ತಿಗೆ ಮಂತ್ರಪಠಣದೊಂದಿಗೆ ಉಡಿತುಂಬಿ ಶಾಸ್ತ್ರೋಕ್ತವಾಗಿ ಪೂಜೆ ಸಲ್ಲಿಸಲಾಯಿತು.

ಪೂಜೆ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಎಸ್.ಕೆ. ಬೆಳ್ಳುಬ್ಬಿ, "ಲಕ್ಷಾಂತರ ಎಕರೆ ಜಮೀನುಗಳಿಗೆ ಹಾಗೂ ಸಕಲ ಜೀವ ರಾಶಿಗಳಿಗೆ ಜೀವಧಾರೆ ನೀಡುವ ಕೃಷ್ಣಾ ನದಿಯನ್ನು ಗೌರವಿಸುವುದು ನಮ್ಮೆಲ್ಲರ ಆದ್ಯ ಕರ್ತವ್ಯ. ಪಶ್ಚಿಮ ಘಟ್ಟದಲ್ಲಿ ಸಮರ್ಪಕ ಮಳೆಯಾದರೆ ಕೃಷ್ಣಾ ನದಿ ತುಂಬಿ ಕರ್ನಾಟಕ, ಮಹಾರಾಷ್ಟ್ರ, ಆಂಧ್ರಪ್ರದೇಶ ಹಾಗೂ ತೆಲಂಗಾಣ ರಾಜ್ಯಗಳ ಜನತೆಗೆ ಸದಾ ಅನುಕೂಲವಾಗುತ್ತದೆ" ಎಂದು ಹೇಳಿದರು.


ಈ ವೇಳೆ ಜಿಲ್ಲಾ ಬಿಜೆಪಿ ಅಧ್ಯಕ್ಷ ಗುರಲಿಂಗಪ್ಪ ಅಂಗಡಿ ಮಾತನಾಡಿ, "25 ವರ್ಷಗಳಿಂದ ರೈತರ ಪರವಾಗಿ ಕೃಷ್ಣಾಮಾತೆಗೆ ಬೆಳ್ಳುಬ್ಬಿ ಅವರು ಪೂಜೆ ಸಲ್ಲಿಸುತ್ತಿರುವ ಈ ಪರಂಪರೆಯನ್ನು ಮುಂದಿನ ಪೀಳಿಗೆಗೂ ಸಾಗಿಸಲು ಯುವಕರು ಕೈಜೋಡಿಸಬೇಕು" ಎಂದು ಕರೆ ನೀಡಿದರು.

ಈ ಕಾರ್ಯಕ್ರಮದಲ್ಲಿ ವಿಜಯಪುರ, ಕೊಲ್ಹಾರ, ಬಳೂತಿ, ಹಣಮಾಪೂರ, ಮಟ್ಟಿಹಾಳ, ಉಪ್ಪಲದಿನ್ನಿ, ಮಸೂತಿ ಸೇರಿದಂತೆ ಅನೇಕ ಗ್ರಾಮಗಳ ರೈತರು ಹಾಗೂ ಜನಪದ ಕಲಾವಿದರು ಭಾಗವಹಿಸಿದ್ದರು.

ಕಲ್ಲಿನಾಥದೇವರು ದಿಗಂಬರೇಶ್ವರಮಠ, ಕೈಲಾಸನಾಥ ಶೀಲವಂತಮಠದ ಶ್ರೀಗಳು ಸಾನ್ನಿಧ್ಯ ವಹಿಸಿದ್ದರು. ಮಲ್ಲನಗೌಡ ಬಿರಾದಾರ, ಡಿ.ಜೆ. ಬಿರಾದಾರ, ಮಲ್ಲು ಕಲಾದಗಿ, ವಿಜಯ ಪೂಜಾರಿ, ಚಂದ್ರಶೇಖರ ಬೆಳ್ಳುಬ್ಬಿ, ಚಂದ್ರಶೇಖರಯ್ಯ ಗಣಕುಮಾರ, ಡಾ.ರಾಚಯ್ಯ ಮಠ, ಹಣಮಂತ ಕೊಠಾರಿ, ವೀರಭದ್ರಪ್ಪ ಬಾಗಿ, ರಾಮಣ್ಣ ಉಪ್ಪಲದಿನ್ನಿ, ಅಖಿಲಗೌಡ ಪಾಟೀಲ, ಜಗದೀಶ ಸುನಗದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಗುಂಟಾ ಪ್ಲಾಟ್ ನಿವಾಸಿಗಳಿಗೆ ಕಾನೂನು ಭದ್ರತೆ ಒದಗಿಸಲು ಮನವಿ

■ ಉದಯರಶ್ಮಿ ದಿನಪತ್ರಿಕೆ



ದೇವರಹಿಪ್ಪರಗಿ: ಪಟ್ಟಣದಲ್ಲಿ 250ಕ್ಕೂ ಹೆಚ್ಚು ಗುಂಟಾ ಪ್ಲಾಟ್‌ಗಳ ಮಾರಾಟದಲ್ಲಿ ಉತಾರೆಗಳ ಮೂಲಕ ದೊಡ್ಡ ಪ್ರಮಾಣದ ಭ್ರಷ್ಟಾಚಾರವೆಸಗಿದ್ದು ಈಗ ಅಲ್ಲಿ ವಾಸವಿರುವ ಕುಟುಂಬಗಳಿಗೆ ಸೂಕ್ತ ಕಾನೂನು ಭದ್ರತೆ ಒದಗಿಸಲು ಆಗ್ರಹಿಸಿ ದಲಿತ ಸಂಘರ್ಷ ಸಮಿತಿ ನೇತೃತ್ವದಲ್ಲಿ ಗ್ರೇಡ್-2 ತಹಶೀಲ್ದಾರ್ ಎಂ.ಜಿ.ಬಿರಾದಾರರಿಗೆ ಕುಟುಂಬಸ್ಥರು ಮನವಿ ಸಲ್ಲಿಸಿದರು.

ಪಟ್ಟಣದ ತಹಶೀಲ್ದಾರ್ ಕಾರ್ಯಾಲಯಕ್ಕೆ ಮಂಗಳವಾರ ಭೂಮಿ ಖರೀದಿಸಿದ ಕುಟುಂಬಗಳು ಮಾಲೀಕರು ಆಗಮಿಸಿ ಜಾಗೆಗಳ ಉತಾರೆಗಳಲ್ಲಿ ನಡೆದ ಅಕ್ರಮದ ಕುರಿತು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ದಲಿತ ಸಂಘರ್ಷ ಸಮಿತಿ ಧುರೀಣ ಪ್ರಕಾಶ ಗುಡಿಮನಿ ಮಾತನಾಡಿ, ಪಟ್ಟಣದಲ್ಲಿ 2005 ಹಾಗೂ 2009-10ರ ಅವಧಿಯಲ್ಲಿ ಗ್ರಾಮ ಪಂಚಾಯಿತಿ ಇದ್ದು ಈ ಸಮಯದಲ್ಲಿ 8 ಮತ್ತು 9ರ ಪುಸ್ತಕದಲ್ಲಿ ಸರ್ವೇ ಸಂಖ್ಯೆ 18/4ರ ಕ್ಷೇತ್ರ 4.32 ಮತ್ತು 18/2ರ ಕ್ಷೇತ್ರ 2.12ರಲ್ಲಿ ಗುಂಟಾ ಪ್ಲಾಟ್‌ಗಳಾಗಿ 250 ಕ್ಕೂ ಹೆಚ್ಚು ಉತಾರೆಗಳನ್ನು ದಾಖಲೆ ಮಾಡಿ ಬೇರೆಯವರ ಹೆಸರಲ್ಲಿ ಅಕ್ರಮವಾಗಿ ಖರೀದಿ ಹಾಕುವ ಮೂಲಕ ಮೋಸ ಮಾಡಲಾಗಿದೆ ಈ ರೀತಿಯಾಗಿ ಮತ್ತು ಬೇಕಾಬಿಟ್ಟಿ ಭೂಅಕ್ರಮ ಅವ್ಯಾಹತವಾಗಿ ಸಾಗುತ್ತಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಸ್ಥಳೀಯ ನಿವಾಸಿ ವಿನೋದ ನಾಶೀಮಠ ಮಾತನಾಡಿ, ಭೂಅಕ್ರಮಗಳಿಗೆ ಸಹಕರಿಸಿದ ಪಂಚಾಯಿತಿ ಹಾಗೂ ಸಬ್ ರಜಿಸ್ಟಾರ್ ಕಾರ್ಯಾಲಯದ ಸಿಬ್ಬಂದಿ ಮೇಲೆ ಕ್ರಮ ಕೈಗೊಂಡು ಮುಂದೆ ಇಂಥ ಅಕ್ರಮಗಳು ಜರುಗದ ಹಾಗೇ ಕ್ರಮ ವಹಿಸಲು ಆಗ್ರಹಿಸಿ ತಹಶೀಲ್ದಾರರಿಗೆ ಮನವಿ ಸಲ್ಲಿಸಿದರು. ಇರ್ಫಾನ ಬೇವೂರ, ಪ್ರಕಾಶ ಮೆಟಗಾರ, ಆನಂದ ದೇವೂರ, ದಾವಲಸಾಬ್ ಯರಗಲ್, ಶ್ರೀಶೈಲ ನೆಗಿನಾಳ, ಅನೀಲ ಹೊಸಮನಿ, ಶೋಭಾ ಹಿಪ್ಪರಗಿ, ಸುವರ್ಣಾ ಪಡಶೆಟ್ಟಿ, ಪಂಡಿತ ರಾಠೋಡ, ಬಾಸು ಡಾಲೇರ, ಹಣಮಂತ ವಾಲಿಕಾರ, ಪ್ರಕಾಶ ಮೆಟಗಾರ, ರವಿ ಧರಿ, ಭೀಮರಾಯ ಡಾಲೇರ, ಮಲ್ಲು ಯಲಗೋಡ ಇದ್ದರು.

## ಎಲ್ಲಾ 26 ಗೇಟ್ ತೆರೆದ ಆಲಮಟ್ಟಿ ಜಲಾಶಯ । 1.10 ಲಕ್ಷ ಕ್ಯೂಸೆಕ್ ನೀರು ಬಿಡುಗಡೆ

# ಆಲಮಟ್ಟಿ ಜಲಾಶಯ ಬಹುತೇಕ ಭರ್ತಿ

■ ಉದಯರಶ್ಮಿ ದಿನಪತ್ರಿಕೆ



ಆಲಮಟ್ಟಿ: ಮಹಾರಾಷ್ಟ್ರದ ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಮುಂದುವರಿದ ಭಾರಿ ಮಳೆಯಿಂದಾಗಿ ಕೃಷ್ಣಾ ನದಿಗೆ ಅಪಾರ ಪ್ರಮಾಣದಲ್ಲಿ ನೀರು ಹ-ರಿದು ಬರುತ್ತಿದೆ. ಇದರಿಂದ ಕೃಷ್ಣಾ ಕೊಳ್ಳದ ಪ್ರಮುಖ ಜಲಾಶಯವಾದ ಆಲಮಟ್ಟಿ ಜಲಾಶಯ ಬಹುತೇಕ ಭರ್ತಿಯಾಗಿದೆ.

ಒಳಹರಿವು ಗಣನೀಯವಾಗಿ ಹೆಚ್ಚಾದ ಹಿನ್ನೆಲೆಯಲ್ಲಿ ಈ ವರ್ಷ ಇದೇ ಮೊದಲ ಬಾರಿಗೆ ಜಲಾಶಯದ ಎಲ್ಲಾ 26 ಗೇಟ್‌ಗಳನ್ನು ತೆರೆದು ಕೃಷ್ಣಾ ನದಿಗೆ ನೀರು ಹರಿಸಲಾಗುತ್ತಿದೆ. 123.081 ಟಿಎಂಸಿ ನೀರು ಸಂಗ್ರಹ ಸಾಮರ್ಥ್ಯ ಹೊಂದಿರುವ ಆಲಮಟ್ಟಿ ಜಲಾಶಯದಲ್ಲಿ ಸದ್ಯ ಸುಮಾರು 118 ಟಿಎಂಸಿ ನೀರು ಸಂಗ್ರಹವಾಗಿದೆ. ಜಲಾಶಯದ ನೀರಿನ ಮಟ್ಟ 519.34 ಮೀಟರ್‌ಗೆ ತಲುಪಿದ್ದು, ಗರಿಷ್ಠ ಮಟ್ಟದ ಸಮೀಪದಲ್ಲಿದೆ. ಬುಧವಾರ ರಾತ್ರಿ 7.30ರ ವೇಳೆಗೆ ಜಲಾಶಯದ ಎಲ್ಲಾ 26 ಗೇಟ್‌ಗಳನ್ನು ತೆರೆಯಲಾಗಿದ್ದು, ಹೆಚ್ಚುವರಿ ನೀರನ್ನು ನಿಯಂತ್ರಿತವಾಗಿ ನದಿಗೆ ಹರಿಸಲಾಗುತ್ತಿದೆ.

**1.10 ಲಕ್ಷ ಕ್ಯೂಸೆಕ್ ಹೊರಹರಿವು:** ಪ್ರಸ್ತುತ ಆಲಮಟ್ಟಿ ಜಲಾಶಯಕ್ಕೆ 89,361 ಕ್ಯೂಸೆಕ್ ನೀರು ಒಳಹರಿವಾಗುತ್ತಿದೆ. ಜಲಾಶಯದ ವಿದ್ಯುದಾಗಾರದ ಮೂಲಕ 42,500 ಕ್ಯೂಸೆಕ್ ಮತ್ತು 26 ಗೇಟ್‌ಗಳ ಮೂಲಕ 67,500 ಕ್ಯೂಸೆಕ್ ಸೇರಿದಂತೆ ಒಟ್ಟು 1,10,000 ಕ್ಯೂಸೆಕ್ ನೀರನ್ನು ಕೃಷ್ಣಾ ನದಿಗೆ ಬಿಡಲಾಗುತ್ತಿದೆ.

ಒಳಹರಿವಿನ ಪ್ರಮಾಣದಲ್ಲಿ ಮತ್ತಷ್ಟು ಏರಿಳಿತವಾಗುವ ಸಾಧ್ಯತೆ ಇರುವುದರಿಂದ ಜಲಾಶಯದ ನೀರಿನ ಮಟ್ಟ ಮತ್ತು ಒಳಹರಿವಿನ ಮೇಲೆ ಅಧಿಕಾರಿಗಳು ನಿರಂತರ ನಿಗಾ ವಹಿಸಿದ್ದಾರೆ.

### ರೈತರಿಗೆ ಸಂತಸ

ಕಳೆದ ಕೆಲವು ದಿನಗಳಿಂದ ಮಹಾರಾಷ್ಟ್ರದ ಕೃಷ್ಣಾ ಜಲಾನಯನ ಪ್ರದೇಶದಲ್ಲಿ ಉತ್ತಮ ಮಳೆಯಾಗುತ್ತಿರುವ ಹಿನ್ನೆಲೆಯಲ್ಲಿ ಕೃಷ್ಣಾ ನದಿಯ ಒಳಹರಿವು ನಿರಂತರವಾಗಿ ಏರಿಕೆಯಾಗಿದೆ. ಇದರ ಪರಿಣಾಮ ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹದಲ್ಲಿಯೂ ತ್ವರಿತವಾಗಿ ಹೆಚ್ಚಳ ಕಂಡುಬಂದಿದೆ.

ಕೆಲವೇ ದಿನಗಳ ಹಿಂದೆ ನೀರಿನ ಕೊರತೆ ಮತ್ತು ಮುಂಗಾರು ಹಂಗಾಮಿನ ನೀರಾವರಿ ಕುರಿತು ಆತಂಕ ವ್ಯಕ್ತವಾಗಿತ್ತು. ಇದೀಗ ಜಲಾಶಯ ಬಹುತೇಕ ಭರ್ತಿಯಾಗಿರುವುದು ಕೃಷ್ಣಾ ಅಚ್ಚುಕಟ್ಟು ಪ್ರದೇಶದ ರೈತರಲ್ಲಿ ಸಂತಸ ಮೂಡಿಸಿದೆ.

### ಮುನ್ನೆಚ್ಚರಿಕೆ

ಜಲಾಶಯದ ಒಳಹರಿವು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಸುರಕ್ಷತಾ ದೃಷ್ಟಿಯಿಂದ ಹೆಚ್ಚುವರಿ ನೀರನ್ನು ಹಂತ ಹಂತವಾಗಿ ಹೊರಬಿಡಲಾಗುತ್ತಿದೆ. ಎಲ್ಲಾ 26 ಗೇಟ್‌ಗಳನ್ನು ತೆರೆಯುವ ಮೂಲಕ ನೀರು ಹರಿಸಲಾಗುತ್ತಿರುವುದರಿಂದ ಕೃಷ್ಣಾ ನದಿಯ ಕೆಳಭಾಗದ ಜನರು ನದಿ ಪಾತ್ರಕ್ಕೆ ಇಳಿಯದಂತೆ ಮತ್ತು ಸುರಕ್ಷತಾ ಕ್ರಮಗಳನ್ನು ಪಾಲಿಸುವಂತೆ ಅಧಿಕಾ-ರಿಗಳು ಸೂಚಿಸಿದ್ದಾರೆ.

ಆಲಮಟ್ಟಿ ಜಲಾಶಯದ ನೀರಿನ ಸಂಗ್ರಹ ಬಹುತೇಕ ಪೂರ್ಣಗೊಂಡಿರುವುದರಿಂದ ಮುಂಬರುವ ದಿನಗಳಲ್ಲಿ ಮಹಾರಾಷ್ಟ್ರದ ಜಲಾನಯನ ಪ್ರದೇಶದಲ್ಲಿ ಮಳೆಯ ಪ್ರಮಾಣ, ಕೃಷ್ಣಾ ನದಿಯ ಒಳಹರಿವು ಮತ್ತು ಜಲಾಶಯದ ನೀರಿನ ಮಟ್ಟವನ್ನು ಆಧರಿಸಿ ಹೊರಹರಿವಿನ ಪ್ರಮಾಣವನ್ನು ನಿಯಂತ್ರಿಸುವ ಸಾಧ್ಯತೆ ಇದೆ.

# ಬೇರೊಬ್ಬರ ಬದುಕಿನಲ್ಲಿ ಸಂತಸ ತರುವುದೇ ಜನ್ಮದಿನದ ಸಂಭ್ರಮ :ಮಠಪತಿ

■ ಉದಯರಶ್ಮಿ ದಿನಪತ್ರಿಕೆ



ತಿಕೋಟಾ: ಹುಟ್ಟುಹಬ್ಬದ ನಿಜವಾದ ಸಂಭ್ರಮ ಎಂದರೆ ಇನ್ನೊಬ್ಬರ ಮುಖದಲ್ಲಿ ನಗು ಮೂಡಿಸುವುದು. ಇಂದು ಆ ನಗುವನ್ನು ನಮ್ಮ ಸರ್ಕಾರಿ ಶಾಲೆಯ ಮಕ್ಕಳ ಮುಖದಲ್ಲಿ ಕಾಣುತ್ತಿದ್ದೇವೆ ಎಂದು ಸರ್ಕಾರಿ ನೌಕರರ ಸಂಘಧ ತಾಲ್ಲೂಕ ಘಟಕದ ಅಧ್ಯಕ್ಷ ಚನ್ನಯ್ಯ ಮಠಪತಿ ಹೇಳಿದರು.

ತಾಲ್ಲೂಕಿನ ಅರಕೇರಿಯ ಶಿವಾಜಿನಗರದ ಸರ್ಕಾರಿ ಕಿರಿಯ ಪ್ರಾಥ-ಮಿಕ ಶಾಲೆಯಲ್ಲಿ ಗ್ರಾಮದ ಕಲಾವಿದ ಗೋಪಾಲ ಇಂಚಗೇರಿ ಅವರಿಂದ ಅವರ ಮಗಳು ಶೀತಲಳ ಜನ್ಮ ದಿನದ ಪ್ರಯುಕ್ತ ಶಾಲೆಯ ಎಲ್ಲ ಮಕ್ಕಳಿಗೆ ಪರೀಕ್ಷೆ ಬರೆಯಲು ಸಹಾಯವಾಗುವ ಕ್ಲೀಪ್ಯಾಡ್ ಹಾಗೂ ಪೆನ್ನು ಸ್ವೀಕರಿಸಿ ಅವರು ಮಾತನಾಡಿದರು.

ಇಂದು ನೀವು ನೀಡಿರುವ ಪೆನ್, ಕ್ಲೀಪ್ಯಾಡ ಕಲಿಕೋಪಕರಣಗಳು ಮಕ್ಕಳ ವಿದ್ಯಾಭ್ಯಾಸಕ್ಕೆ ಪ್ರೇರಣೆಯಾಗಲಿವೆ. ಕಲಿಕೋಪಕರಣಗಳು ಕೇವಲ ವಸ್ತುಗಳಲ್ಲ, ಅವು ಮಕ್ಕಳ ಕನಸುಗಳಿಗೆ ರೆಕ್ಕೆಗಳನ್ನು ನೀಡುವ ಸಾಧನಗಳು. ಇಂದು ನೀಡಿರುವ ಈ ಸಣ್ಣ ಕೊಡುಗೆ ನಾಳೆಯ ದೊಡ್ಡ ಸಾಧನೆಗೆ ಅಡಿಪಾಯವಾಗಬಹುದು.

ತಮ್ಮ ಮಗಳ ಜನ್ಮದಿನವನ್ನು ಕೇವಲ ಕುಟುಂಬದ ಸಂಭ್ರಮವಾಗಿಸದೆ, ಶಾಲೆಯ ಮಕ್ಕಳಿಗೆ ಕಲಿಕೋಪಕರಣಗಳನ್ನು ನೀಡುವ ಮೂಲಕ ಸಮಾಜಮುಖಿ ಕಾರ್ಯವಾಗಿ ಆಚರಿಸಿರುವ ದಾನಿ ಕುಟುಂಬಕ್ಕೆ ನಮ್ಮ ಶಾಲೆಯ ಪರವಾಗಿ ಹೃತ್ಪೂರ್ವಕ ಅಭಿನಂದನೆಗಳು ಹಾಗೂ ಕೃತಜ್ಞತೆಗಳು ತಿಳಿಸಿದರು.

ಈ ಸಂದರ್ಭದಲ್ಲಿ ಕಲಾ ಸಿಂಚನ ಕಲಾವಿದ ಗೋಪಾಲ ಹೂಗಾರ್ , ಗಾಯಕ ಕೃಷ್ಣ, ಜಿಲ್ಲಾ ಶಿಕ್ಷಕ ಸಂಘದ ಮಾಜಿ ಪ್ರಧಾನ ಕಾರ್ಯದರ್ಶಿ ಜಗದೀಶ್ ಬೋಳಸೂರ, ಗೋಪಾಲ್ ಇಂಚಗೇರಿ ಅವರ ಕುಟುಂಬ ಸದಸ್ಯರು, ದೀಪಾ ಪಲ್ಯದ ಉಪಸ್ಥಿತರಿದ್ದರು.

# ಅರಳದಿನ್ನಿಯಲ್ಲಿ ಮೀನುಗಾರರಿಂದ ಕಡಲು ಪೂಜೆ

■ ಉದಯರಶ್ಮಿ ದಿನಪತ್ರಿಕೆ

ಆಲಮಟ್ಟಿ: ವರ್ಷಪೂರ್ತಿ ಅನ್ನ ನೀಡುವ ಕೃಷ್ಣಾ ಮಾತೆಗೆ ಆಲಮಟ್ಟಿ ಜಲಾಶಯದ ಮುಂಭಾಗದ ಅರಳದಿನ್ನಿ ಗ್ರಾಮದ ಮೀನುಗಾರರು ಬುಧವಾರ ಕಡ್ಲಿಗರ ಹುಣ್ಣಿಮೆ ನಿಮಿತ್ತ ಗಂಗಾ ಪೂಜೆ ಸಲ್ಲಿಸಿದರು.ಬೆಳಿಗ್ಗೆಯಿಂದಲೇ ಕ-ರಿಗಡಬು ಮತ್ತು ಇತರ ನೈವೇದ್ಯ ತಯಾರಿಸಿ ಜಲಾಶಯದ ಮುಂಭಾಗದ ಕೃಷ್ಣಾ ನದಿ ತೀರದಲ್ಲಿ ಪೂಜೆ ಸಲ್ಲಿಸಲಾಯಿತು. ನಂತರ ನದಿಗೆ ಇಳಿದು ನೈವೇದ್ಯ, ದಕ್ಷಿಣೆ ಸಮೇತ ಎಲ್ಲವನ್ನೂ ಕೃಷ್ಣಾ ಮಾತೆಗೆ ಅರ್ಪಿಸಲಾಯಿತು.

"ವರ್ಷಪೂರ್ತಿ ನಮ್ಮ ಬದುಕಿಗೆ ಅನ್ನ ಹಾಕುವ ಹಾಗೂ ನಮ್ಮನ್ನು ರಕ್ಷಿಸುವವಳು ಕೃಷ್ಣಾ ಮಾತೆ. ಹೀಗಾಗಿ ವರ್ಷಕೊಮ್ಮೆ ಕಡ್ಲಿಗರ ಹುಣ್ಣಿಮೆಯಂದು ನಾವೆಲ್ಲರೂ ಸೇರಿ ಪೂಜೆ ಸಲ್ಲಿಸುತ್ತೇವೆ. ಈ ದಿನ ಅರಳದಿನ್ನಿಯ ಯಾವೊಬ್ಬ ಮೀನುಗಾರರೂ ಬಲೆ ಹಾಕಿ ಮೀನು ಹಿಡಿಯುವುದಿಲ್ಲ" ಎಂದು ಮೀನುಗಾರ ಮಹೇಶ ಮಾದರ ತಿಳಿಸಿದರು.

ಈ ಸಂದರ್ಭದಲ್ಲಿ ಮೀನುಗಾರರಾದ ನೀಲಪ್ಪ ಮಾದರ, ಅನಿಲ ವಾಲಿಕಾರ, ಮಹಾಂತೇಶ ಧನವೆ, ನಿಜಪ್ಪ ಮಾದರ, ಮಂಜುನಾಥ ಮಾದರ, ಶರಣಪ್ಪ ಮಾದರ, ಯಲಗೂರದಪ್ಪ ಮಾದರ, ದುರ್ಗಪ್ಪ ಮಾದರ, ಸದ್ದಾಂ ಕಂಕಣಪೀರ, ಗೈಬು ಕಂಕಣಪೀರ, ಚಂದ್ರು ಮಾದರ ಸೇರಿದಂತೆ ಹಲವರು ಇದ್ದರು. ಅಲ್ಲಿಗೆ ಬಂದಿದ್ದ ಎಲ್ಲ-ರಿಗೂ ಅನ್ನ ಪ್ರಸಾದದ ವ್ಯವಸ್ಥೆ ಮಾಡಲಾಗಿತ್ತು.



# ಶೈಕ್ಷಣಿಕ ಶುಲ್ಕ ಮರುಪಾವತಿ ಮತ್ತು ಕ್ರೀಡಾ ವಿದ್ಯಾರ್ಥಿ ವೇತನ ಯೋಜನೆಗಳಿಗೆ ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

■ ಉದಯರಶ್ಮಿ ದಿನಪತ್ರಿಕೆ

ಬೆಂಗಳೂರು: ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯು ಅರ್ಹ ಸಾಧಕ ಕ್ರೀಡಾಪಟುಗಳು ಹಾಗೂ ಇತರರಿಂದ ವಿವಿಧ ಪ್ರಶಸ್ತಿ ಮತ್ತು ವಿವಿಧ ಪ್ರೋತ್ಸಾಹಧನ ನೀಡುವ ಯೋಜನೆಗಳಿಗೆ ಅರ್ಜಿ ಸಲ್ಲಿಕೆ ಅವಧಿಯನ್ನು ಅಗಸ್ಟ್ 31 ರವರೆಗೆ ವಿಸ್ತರಿಸಿದೆ.

2025–26 ನೇ ಸಾಲಿನ ಕ್ರೀಡಾ ವಿದ್ಯಾರ್ಥಿ ವೇತನ ಹಾಗೂ 2026–27 ನೇ ಸಾಲಿನ ಶೈಕ್ಷಣಿಕ ಶುಲ್ಕ ಮರುಪಾವತಿಗೆ ಅರ್ಜಿ ಸಲ್ಲಿಕೆಗೆ ಈ ಹಿಂದೆ ಜುಲೈ 31 ಕೊನೆಯ ದಿನವಾಗಿತ್ತು ಈಗ ಅವಧಿಯನ್ನು ಅಗಸ್ಟ್ 31 ರವರೆಗೆ ವಿಸ್ತರಿಸಲಾಗಿದೆ.ಅರ್ಹ ಕ್ರೀಡಾಪಟುಗಳು ಈ ಸೌಲಭ್ಯದ ಸದುಪಯೋಗ ಪಡೆದುಕೊಳ್ಳುವಂತೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಆಯುಕ್ತರಾದ ಎಂ.ಎನ್.ಅನುಚೇತ್ ಪ್ರಕಟಣೆಯಲ್ಲಿ ಕೋರಿದ್ದಾರೆ.



# ಜನಪದ ಸಂಗೀತ ಅಧ್ಯಾತ್ಮಿಕವಾಗಿ ದೇವರನ್ನು ಕಾಣುವ ಸರಳ ಮಾರ್ಗ

ಕಲಬುರಗಿ : ಜನಪದ ಸಂಗೀತದಿಂದ ಮಾನವ ಅಧ್ಯಾತ್ಮಿಕವಾಗಿ ದೇವರನ್ನು ಕಾಣಲು ಸರಳ ಮಾರ್ಗ ಎಂದು ಶಾಂತಯ್ಯ ಸ್ವಾಮಿ ಹೀರಾಪೂರ ನುಡಿದರು. ನಗರದ ಅಳಂದ ರಸ್ತೆ

ಶ್ರೀ ಅಂಬಾ ಭವಾನಿ ಮಂದಿರ ಆವರಣದಲ್ಲಿ ಜರುಗಿದ ಕಲಬುರಗಿಯ ಶ್ರೀ ದೇವಿ ಸರಸ್ವತಿ ಕಲಾಬಳಗ ಸಂಘದ ವತಿಯಿಂದ ಜನಪದ ಸಂಭ್ರಮ ಸಾಂಸ್ಕೃತಿಕ ದಲ್ಲಿ ಉದ್ಘಾಟನೆಯನ್ನು ನೆರವೇರಿಸಿ ಮಾತನಾಡುತ್ತಾ ಕಲಾವಿದರ ಸಂಗಿತವನ್ನು ಆಲಿಸಿ ಪೊತ್ಸಾಹಿಸಬೆಕೆಂದು ಹೇಳಿದರು.

ಅಧ್ಯಕ್ಷತೆಯನ್ನು ರಾಜಕುಮಾರ ಆಳಂದಕರ ವಹಿಸಿದ್ದರು ಅತಿಥಿಗಳಾಗಿ ಶ್ರೀಮಂತ ಪೂಜಾರಿ ಕಲಬುರಗಿ, ದಯಾನಂದ ಸುತಾರ ಕಲಬುರಗಿ, ದಯಾನಂದ ಅಚಲೇರಿ ಕಲಬುರಗಿ ಆಗಮಿಸಿದರು. ಜನಪದ ಸಂಭ್ರಮ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ವಚನ ಗಾಯನ : ದೇವಿದಾಸ ಗೊಂದಲಿ ಕಲಬುರಗಿ ತತ್ವಪದ: ಬಸಯ್ಯ ಗುತ್ತೇದಾರ, ಕಲಬುರಗಿ, ವಚನ ಗಾಯನ : ಶಿವಾನಂದ ಅಳ್ಳಗಿ ಕಲಬುರಗಿ, ಭಜನಾ ಪದಗಳು : ರಾಮಲಿಂಗಯ್ಯಾ ಅಟ್ಟೂರ ಕಲಬುರಗಿ, ಕೀರ್ತನ : ರಾಚಯ್ಯ ಸ್ವಾಮಿ ರಟಕಲ್, ತಬಲಾ ಸಾಥ : ಶ್ರೀಶೈಲ ಹಡಪದ, ಯಳಸಂಗಿ, ಸಂಜೀವಕುಮಾರ ದೇಶಪಾಂಡೆ ಬ್ರಹ್ಮಪೂರ ಕಲಬುರಗಿ ಅವರು ನಡೆಸಿಕೊಟ್ಟರು ಎಂದು ಸಂಸ್ಥೆಯ ಅಧ್ಯಕ್ಷರಾದ ಶರಣಪ್ಪ ಕೆ. ಸಾಗನೂರ ತಿಳಿಸಿದ್ದಾರೆ.



# ಸಂಗೀತದ ಕಡೆಗೆ ಹೆಚ್ಚು ಒಲವು ತೋರಿಸಿ: ಸಿದ್ದೇಶ್ವರ ಶಾಸ್ತ್ರಿಗಳು

ಕಲಬುರಗಿ:ಸಂಗೀತದ ಕಡೆ ಒಲವು ಹೆಚ್ಚು ಕೊಡಬೇಕು ಸಂಗೀತ ಉಳಿಸಿ ಬೆಳೆಸುವುದು ನಮ್ಮ ನಿಮ್ಮೆಲ್ಲರ ಕರ್ತವ್ಯ ಆದರೆ ಇವತ್ತಿನ ಕಂಪ್ಯೂಟ–ರ್ ಮೊಬೈಲ್ ಯುಗದಲ್ಲಿ ಸಂಗೀತವನ್ನು ಮರೆತು ಹೋಗಲಾಗುತ್ತಿದೆ ಅದನ್ನು ಉಳಿಸಿ ಬೆಳೆಸುವುದು ಪ್ರತಿಯೊಬ್ಬರ ಕರ್ತವ್ಯ ಎಂದು ಖ್ಯಾತ ಜ್ಯೋತಿಷ್ಯ ಪುರಾಣ ಪಂಡಿತರಾದ ಸಿದ್ದೇಶ್ವರ ಶಾಸ್ತ್ರಿಗಳು ಸುಂಟನೂರು ಹೇಳಿದರು.

ನಗರದ ವಿಜಯನಗರ ಕಾಲೋನಿಯ ದಂಡಗುಂಡಬಸವಣ್ಣದೇವಸ್ಥಾನ,ವೀರಾಂಜನೇಯ ದೇವಸ್ಥಾನದಲ್ಲಿ ಗಾನಗಂಧರ್ವ ಸಂಸ್ಕೃತಿಕ ಸೇವಾ ಸಂಸ್ಥೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಜಾನಪದ ಸಂಗೀತ ಸಂಭ್ರಮೋತ್ಸವ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ವೇದಿಕೆಯಲ್ಲಿ ಶರಣು ಎ ಗುತ್ತೇದಾರ, ಶಾರದಾಬಾಯಿ ಪಾಟೀಲ್, ಶಿವರಾಯ ಅಟ್ಟೂರು, ಮಲ್ಲಿಕಾರ್ಜುನ್ ಬಾಗೇವಾಡಿ, ನಾಗರಾಜ್ ಪಾಟೀಲ ಅಲ್ಲದೆ ದೇವಸ್ಥಾನದ ಅಧ್ಯಕ್ಷರು ಉಪಾಧ್ಯಕ್ಷರು ಸರ್ವ ಸದಸ್ಯರು ಅಲ್ಲದೆ ಅನೇಕ ಗಣ್ಯ ಮಾನ್ಯ ವ್ಯಕ್ತಿಗಳು ಉಪಸ್ಥಿತರಿದ್ದರು.

ಈ ಸಂಗೀತ ಕಾರ್ಯಕ್ರಮದಲ್ಲಿ ಹೆಸರಾಂತ ಸಂಗೀತ ಕಲಾವಿದರು ತಮ್ಮ ಸಂಗೀತ ಸೇವೆ ಸಲ್ಲಿಸಿದರೆಂದು ಸಂಸ್ಥೆಯ ಅಧ್ಯಕ್ಷರಾದ ಮೌನೇಶ್ ಪಂಚಾಳ ತಿಳಿಸಿದ್ದಾರೆ.




# ಗ್ಯಾರಂಟಿ ಯೋಜನೆ ಪರಿಷ್ಕರಣೆ ಕುರಿತು ಸಭೆ

ಜೇವರಗಿ: ಗ್ಯಾರಂಟಿ ಯೋಜನೆಗಳ ಪರಿಷ್ಕರಣೆ ಕುರಿತು ಪ್ರಗತಿ ಪರಿಶೀಲನೆ ಸಭೆ ನಡೆಯಿತು.ಸಭೆಗೂ ಮುನ್ನ ಗ್ಯಾರಂಟಿ ಯೋಜನೆಗಳಿಗೆ ಮೂರು ವರುಷ ತುಂಬಿರುವ ಹಿನ್ನಲೆಯಲ್ಲಿ ತಹಸೀಲ್ದಾರ್ ಕಚೇರಿ ಆವರಣದಲ್ಲಿ ಸಸಿಗಳನ್ನು ನೆಡುವ ಮೂಲಕ ಸಭೆಗೆ ಚಾಲನೆ ನೀಡಿದರು

ಗೃಹಲಕ್ಷ್ಮೀ ಗೃಹ ಜ್ಯೋತಿ ಬಗ್ಗೆ ರಾಜ್ಯ ಸರಕಾರ ಪರಿಷ್ಕರಣೆ ಹಮ್ಮಿಕೊಂಡಿದ್ದು ಅಧಿಕಾರಿಗಳು ಜನರಿಗೆ ತೊಂದರೆಯಗದಂತೆ ಕಾರ್ಯನಿರ್ವಹಿಸಬೇಕೆಂದು ಸೂಚನೆ ನೀಡಿದೆ. ಸರಕಾರದ ಆದೇಶದಂತೆ ನ್ಯಾಯ ಬೆಲೆ ಅಂಗಡಿಗಳು ಕಡ್ಡಾಯವಾಗಿ ಬೆಳಿಗ್ಗೆ 6 ರಿಂದ 10 ಘಂಟೆಯವರಿಗೆ ತೆರೆದಿರಬೇಕು ಇಲ್ಲದಿದ್ದರೆ ಅಂತ ಅಂಗಡಿಗಳ ಮೇಲೆ ಕ್ರಮ ಜರುಗಿಸಲಾಗುವದು ಎಂದು ಎಚ್ಚರಿಕೆ ನೀಡಿದೆ ಸಭೆಯಲ್ಲಿ ಇಓ ವೀರಣ್ಣ ಕೌಲಗಿ ಗ್ಯಾರಂಟಿ ಸದಸ್ಯರಾದ ರಾಜು ಗುತ್ತೇದಾರ ವಿ ಟಿ ನಾಗರಾಜ್ ರುಕುಮ್ ತೋಲಾ ಭಾಗಬಾನ್ ಬಸವರಾಜ್ ದೇವದ್ರುಗ ಖುರ್ಸಿದ ಅಲಿ ನೆದಲಗಿ ಶರಣಬಸಪ್ಪ ರೇವನೂರ್ ಸಂತೋಷ ಜೈನಾಪುರ ಐದು ಇಲಾಖೆಗಳ ಅಧಿಕಾರಿಗಳು ಸೇರಿದಂತೆ ಮುಂತಾದವರು ಇದ್ದರು

# ಅಕ್ರಮ ಮರಳು ಗಣಿಗಾರಿಕೆ, ಸಾಗಾಣಿಕೆಗೆ ಕಡಿವಾಣ: ಗೃಹ ಸಚಿವ ಪ್ರಿಯಾಂಕ್ ಖರ್ಗೆ



ಕಲಬುರಗಿ :ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ, ಸಂಗ್ರಹಣೆ ಹಾಗೂ ಸಾಗಾಣಿಕೆಯನ್ನು ಸಂಪೂರ್ಣವಾಗಿ ತಡೆಗಟ್ಟುವ ಉದ್ದೇಶದಿಂದ ಗೃಹ ಸಚಿವ, ಮಾಹಿತಿ ತಂತ್ರಜ್ಞಾನ, ಜೈವಿಕ ತಂತ್ರಜ್ಞಾನ ಹಾಗೂ ಇ–ಆಡಳಿತ ಸಚಿವ ಪ್ರಿಯಾಂಕ್ ಖರ್ಗೆ ಅವರ ನಿರ್ದೇಶನದ ಮೇರೆಗೆ ರಾಜ್ಯ ಪೊಲೀಸ್ ಮಹಾನಿರ್ದೇಶಕರು (ಡಿಜಿ ಮತ್ತು ಐಜಿಪಿ) ರಾಜ್ಯದ ಎಲ್ಲಾ ಪೊಲೀಸ್ ಆಯುಕ್ತರು, ಪೊಲೀಸ್ ಮಹಾನಿರೀಕ್ಷಕರು, ಉಪ ಮಹಾನಿರೀಕ್ಷಕರು ಹಾಗೂ ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಸಮಗ್ರ ಸುತ್ತೋಲೆ ಹೊರಡಿಸಿದ್ದಾರೆ.

ಅಕ್ರಮ ಮರಳು ಗಣಿಗಾರಿಕೆ ಪರಿಸರಕ್ಕೆ ಹಾನಿ ಉಂಟುಮಾಡುವುದಲ್ಲದೆ, ಕಾನೂನು ಸುವ್ಯವಸ್ಥೆ ಮತ್ತು ಸರ್ಕಾರದ ಆದಾಯಕ್ಕೂ ಧಕ್ಕೆ ತರುತ್ತಿದೆ. ಇಂತಹ ಅಕ್ರಮ ಚಟುವಟಿಕೆಗಳನ್ನು ಯಾವುದೇ ಕಾರಣಕ್ಕೂ ಸಹಿಸದ 'ಶೂನ್ಯ ಸಹಿಷ್ಣುತೆ' ನೀತಿಯನ್ನು ಸರ್ಕಾರ ಅನುಸರಿಸುತ್ತಿದ್ದು, ರಾಜ್ಯಾದ್ಯಂತ ಕಟ್ಟುನಿಟ್ಟಿನ ಜಾರಿಯನ್ನು ಖಚಿತಪಡಿಸಲು ಈ ಸುತ್ತೋಲೆ ಹೊರಡಿಸಲಾಗಿದೆ.

ಸುತ್ತೋಲೆಯಲ್ಲಿ ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಈಗಾಗಲೇ ರಚಿಸಲಾಗಿರುವ ಟಾಸ್ಕ್ ಫೋರ್ಸ್‌ಗಳನ್ನು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ಅಕ್ರಮ ಮರಳು ಗಣಿಗಾರಿಕೆ ನಡೆಯುವ ಪ್ರದೇಶಗಳನ್ನು ಗುರುತಿಸಿ ನಿರಂತರ ನಿಗಾ ವಹಿಸುವುದು, ಅಕ್ರಮ ಸಾಗಾಣಿಕೆ ಮತ್ತು ಸಂಗ್ರಹಣೆಯನ್ನು ತಡೆಯುವುದು ಹಾಗೂ ಕಾನೂನು ಕ್ರಮ ಕೈಗೊಳ್ಳುವುದು ಸಂಬಂಧಿತ ಪೊಲೀಸ್ ಅಧಿಕಾರಿಗಳ ಜವಾಬ್ದಾರಿಯಾಗಿದೆ ಎಂದು ಸ್ಪಷ್ಟಪಡಿಸಲಾಗಿದೆ.

ರಾಜ್ಯದ ಗಡಿ ಪ್ರದೇಶಗಳು ಸೇರಿದಂತೆ ಅಂತರರಾಜ್ಯ ಮಾರ್ಗಗಳಲ್ಲಿ ಅಕ್ರಮ ಮರಳು ಸಾಗಾಣಿಕೆಯನ್ನು ತಡೆಗಟ್ಟಲು ಗಣಿ ಮತ್ತು ಭೂವಿಜ್ಞಾನ ಇಲಾಖೆ, ಕಂದಾಯ ಇಲಾಖೆ ಹಾಗೂ ಅರಣ್ಯ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ತನಿಖಾ ಕೇಂದ್ರಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿರುವುದನ್ನು ಖಚಿತಪಡಿಸಿಕೊಳ್ಳಲು ಹಾಗೂ ಅಗತ್ಯ ಮೂಲಸೌಕರ್ಯಗಳ ಕೊರತೆ ಕಂಡುಬಂದರೆ ಸಂಬಂಧಿತ ಇಲಾಖೆಯ ಗಮನಕ್ಕೆ ತರುವಂತೆ ನಿರ್ದೇಶಿಸಲಾಗಿದೆ.

ಪ್ರತಿ ಪೊಲೀಸ್ ಘಟಕವು ತನ್ನ ವ್ಯಾಪ್ತಿಯಲ್ಲಿರುವ ಅಕ್ರಮ ಮರಳು ಚಟುವಟಿಕೆಗಳ ಬಗ್ಗೆ ಗುಪ್ತಚರ ಮಾಹಿತಿ ಸಂಗ್ರಹಿಸಿ, ಅಗತ್ಯವಿದ್ದಲ್ಲಿ ದಿಢೀರ್ ದಾಳಿ ನಡೆಸಬೇಕು. ಈ ಅಕ್ರಮ ದಂಧೆಯಲ್ಲಿ ನಿರಂತರವಾಗಿ ತೊಡಗಿರುವವರ ವಿರುದ್ಧ ಗೂಂಡಾ ಕಾಯ್ದೆಯಡಿ ಕ್ರಮ ಕೈಗೊಳ್ಳುವಂತೆಯೂ ಸುತ್ತೋಲೆಯಲ್ಲಿ ಸೂಚಿಸಲಾಗಿದೆ.

ಪ್ರತಿ ತಿಂಗಳ ಅಪರಾಧ ಪರಿಶೀಲನಾ ಸಭೆಯಲ್ಲಿ ಅಕ್ರಮ ಮರಳು ಗಣಿಗಾರಿಕೆ, ಸಾಗಾಣಿಕೆ ಹಾಗೂ ಸಂಗ್ರಹಣೆ ಪ್ರಕರಣಗಳ ಕುರಿತು ಠಾಣಾವಾರು ಪರಿಶೀಲನೆ ನಡೆಸಿ, ಅಧೀನ ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಬೇಕು. ಅಲ್ಲದೆ, ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಟಾಸ್ಕ್ ಫೋರ್ಸ್ ಸಭೆಗಳನ್ನು ನಿಯಮಿತವಾಗಿ ನಡೆಸಿ ಎಲ್ಲ ಇಲಾಖೆಗಳ ಸಮನ್ವಯದೊಂದಿಗೆ ಅಕ್ರಮ ಚಟುವಟಿಕೆಗಳನ್ನು ನಿಯಂತ್ರಿಸಲು ಕ್ರಮ ಕೈಗೊಳ್ಳುವಂತೆ ನಿರ್ದೇಶಿಸಲಾಗಿದೆ.

# ಎಸ್‌ಬಿಆರ್ ಶಾಲೆಯಲ್ಲಿ ಸಂಚಾರ ನಿಯಮಗಳ ಕುರಿತು ಜಾಗೃತಿ

ಕಲಬುರಗಿ:ಶರಣಬಸವೇಶ್ವರ ರೆಸಿಡೆನ್ಷಿಯಲ್ ಪಬ್ಲಿಕ್ ಶಾಲೆಯ 1 ರಿಂದ 5ನೇ ತರಗತಿಯ ವಿದ್ಯಾರ್ಥಿಗಳು ಇತ್ತೀಚೆಗೆ ಸಂಚಾರ ನಿಯಮಗಳ ಕುರಿತು ಪ್ರದರ್ಶನ ಮತ್ತು ಪ್ರಾಯೋಗಿಕ ನಾಟಕಗಳನ್ನು ಪ್ರಸ್ತುತಪಡಿಸಿದರು. ರಸ್ತೆ ದಾಟುವಾಗ ಪ್ರತಿಯೊಬ್ಬರೂ ಪಾಲಿಸಬೇಕಾದ ಸಂಚಾರ ನಿಯಮಗಳ ಬಗ್ಗೆ ಈ ಪ್ರದರ್ಶನದ ಮೂಲಕ ಮಕ್ಕಳು ಜಾಗೃತಿ ಮೂಡಿಸಿದರು.




ನಿಯಮಗಳ ಉಲ್ಲಂಘನೆಯು ಭೀಕರ ಅಪಘಾತಗಳು ಮತ್ತು ವಿವಿಧ ಅಹಿತಕರ ಘಟನೆಗಳಿಗೆ ಕಾರಣವಾಗುತ್ತದೆ ಎಂಬುದನ್ನು ಅವರು ಎತ್ತಿ ತೋರಿಸಿದರು. ರಸ್ತೆ ದಾಟುವಾಗ ಮೊಬೈಲ್ ಫೋನ್‌ಗಳನ್ನು ಬಳಸಬಾರದು ಹಾಗೂ ವಾಹನ ಚಲಾಯಿಸುವಾಗ ಹೆಲ್ಮೆಟ್ ಧರಿಸುವುದು ಕಡ್ಡಾಯವಾಗಿದೆ ಎಂದು ಅವರು ತಿಳಿಸಿದರು. ಈ ವಿವಿಧ ಸಂಚಾರ ನಿಯಮಗಳನ್ನು ಪಾಲಿಸುವುದರಿಂದ ರಸ್ತೆ ಅಪಘಾತಗಳನ್ನು ಹೇಗೆ ತಡೆಗಟ್ಟಬಹುದು ಎಂಬುದನ್ನು ಪ್ರದರ್ಶಿಸುವುದೇ ಈ ಕಾರ್ಯಕ್ರಮದ ಮುಖ್ಯ ಉದ್ದೇಶವಾಗಿತ್ತು. ಅಲ್ಲದೆ, ಶಾಲಾ ಆವರಣದಲ್ಲಿಯೂ ಸಹ ರಸ್ತೆ ದಾಟುವಾಗ ವಾಹನಗಳಿಗೆ ಸಂಬಂಧಿಸಿದ ಸಂಚಾರ ಮಾರ್ಗಸೂಚಿಗಳನ್ನು ಪ್ರತಿಯೊಬ್ಬರೂ ಪಾಲಿಸಬೇಕು ಎಂದು ತಿಳಿಸಲಾಯಿತು. ಈ ಕಾರ್ಯಕ್ರಮದಲ್ಲಿ ಕಾಲೇಜಿನ ಮೇಲ್ವಿಚಾರಕರಾದ ಶ್ರೀಶೈಲ ಹೊಗಡೆ ಮತ್ತು ಹೇಮಂತಕುಮಾರ್, ಹಿರಿಯ ಶಿಕ್ಷಕಿ ಶ್ರೀಮತಿ ಶಾರದಾ ರಾಂಪುರೆ, ಇತರ ಶಿಕ್ಷಕರು, ವಿದ್ಯಾರ್ಥಿಗಳು ಮತ್ತು ಪೊಷಕರು ಭಾಗವಹಿಸಿದ್ದರು. ಭಾಗವಹಿಸಿದವರೆಲ್ಲರೂ ಸಂಚಾರ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವುದಾಗಿ ಪ್ರತಿಜ್ಞೆ ಮಾಡಿದರು. ಸಂಸ್ಥೆಯ 9ನೇ ಪೀಠಾಧಿಪತಿಗಳಾದ ಶ್ರೀ ಚಿ. ದೊಡ್ಡಪ್ಪ ಅಪ್ಪಾ, ಶರಣಬಸವೇಶ್ವರ ವಿಶ್ವವಿದ್ಯಾಲಯದ ಕುಲಪತಿಗಳಾದ ಪೂಜ್ಯ ಮಾತೋಶ್ರೀ ಡಾ.ದಾಕ್ಷಾಯಣಿ ಅವ್ವಾಜಿ, ಸಂಸ್ಥೆಯ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ್ ಮತ್ತು ಪ್ರಾಂಶುಪಾಲರಾದ ಶ್ರೀ ಎನ್.ಎಸ್. ದೇವರಕಲ್ ಅವರು ಭಾಗವಹಿಸಿದ ಎಲ್ಲಾ ವಿದ್ಯಾರ್ಥಿಗಳಿಗೆ ಶುಭ ಹಾರೈಸಿದರು.

# ವಿಶ್ವ ಹೆಪಟೈಟಿಸ್ ದಿನದ ಅಂಗವಾಗಿ ಎನ್‌ಕೆ ಆಸ್ಪತ್ರೆಯಲ್ಲಿ ಜಾಗೃತಿ ಕಾರ್ಯಕ್ರಮ

ಕಲಬುರಗಿ: ವಿಶ್ವ ಹೆಪಟೈಟಿಸ್ ದಿನದ ಅಂಗವಾಗಿ ನಗರದ ಎನ್‌ಕೆ ಆಸ್ಪತ್ರೆಯಲ್ಲಿ ಹೆಪಟೈಟಿಸ್ ಕುರಿತು ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಲಾಯಿತು.

ಕಾರ್ಯಕ್ರಮದಲ್ಲಿ ಎನ್‌ಕೆ ಆಸ್ಪತ್ರೆಯ ಅಧ್ಯಕ್ಷ ಹಾಗೂ ಖ್ಯಾತ ಜಠರ ಮತ್ತು ಕರುಳಿನ ಶಸ್ತ್ರಚಿಕಿತ್ಸಕ ಡಾ. ಆರಿಫ್ ರಝಾ ಅಹ್ಮದ್ ಅವರು ಹೆಪಟೈಟಿಸ್ ಕಾಯಿಲೆಯ ಕುರಿತು ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಿದರು. ಹೆಪಟೈಟಿನ ವಿವಿಧ ವಿಧಗಳು, ಅದರ ಲಕ್ಷಣಗಳು, ಸೋಂಕು ಹರಡುವ ಮಾರ್ಗಗಳು ಹಾಗೂ ರೋಗವನ್ನು




ತಡೆಗಟ್ಟಲು ಕೈಗೊಳ್ಳಬೇಕಾದ ಮುನ್ನೆಚ್ಚರಿಕಾ ಕ್ರಮಗಳ ಕು–ರಿತು ವಿವರವಾಗಿ ಮಾಹಿತಿ ನೀಡಿದರು

ಈ ಸಂದರ್ಭದಲ್ಲಿ ಮಾತನಾಡಿದಎನ್‌ಕೆ ಆಸ್ಪತ್ರೆಯ ಜಠರ ಮತ್ತು ಕರುಳಿನ ತಜ್ಞರಾದ ಡಾ. ಜೀಶಾನ್ ಅಲಿ ಅವರು ಹೆಪಟೈಟಿಸ್ ಸೋಂಕನ್ನು ತಡೆಗಟ್ಟುವ ವಿಧಾನಗಳು, ಸ್ವಚ್ಛತೆ ಕಾಪಾಡಿಕೊಳ್ಳುವ ಮಹತ್ವ, ಸುರಕ್ಷಿತ ಆರೋಗ್ಯ ಕ್ರಮಗಳು ಹಾಗೂ ಸಮಯಕ್ಕೆ ಸರಿಯಾಗಿ ಪರೀಕ್ಷೆ ಮತ್ತು ಚಿಕಿತ್ಸೆಯನ್ನು ಪಡೆಯುವ ಅಗತ್ಯತೆಯ ಕುರಿತು ಉಪನ್ಯಾಸ ನೀಡಿದರು.ಕಾರ್ಯಕ್ರಮದಲ್ಲಿ ಎನ್‌ಕೆ ಆಸ್ಪತ್ರೆಯ ಅಧ್ಯಕ್ಷ ಡಾ. ಆರಿಫ್ ರಝಾ ಅಹ್ಮದ್ ಅವರು, ಎನ್‌ಕೆ ಆಸ್ಪತ್ರೆಯ ಎಲ್ಲಾ ವೈದ್ಯರು ಹಾಗೂ ಸಿಬ್ಬಂದಿಗೆ ಉಚಿತ ಹೆಪಟೈಟಿಸ್ ಲಸಿಕಾ ಅಭಿಯಾನವನ್ನು ನಡೆಸಲಾಗುವುದುಎಂದು ಘೋಷಿಸಿದರು. ಆಸ್ಪತ್ರೆಯ ಸಿಬ್ಬಂದಿಯ ಆರೋಗ್ಯ ಮತ್ತು ಸುರಕ್ಷತೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದ್ದು, ಈ ಲಸಿಕಾ ಅಭಿಯಾನವು ಹೆಪಟೈಟಿಸ್ ತಡೆಗಟ್ಟುವ ನಿಟ್ಟಿನಲ್ಲಿ ಮಹತ್ವದ ಕ್ರಮವಾಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿಎನ್‌ಕೆ ಆಸ್ಪತ್ರೆಯ ಕ್ರಿಟಿಕಲ್ ಕೇರ್ ವಿಭಾಗದ ಮುಖ್ಯಸ್ಥ ಡಾ. ಹೈದರ್ ರೆಹಮಾನ್, ಹಿರಿಯ ಮೂತ್ರರೋಗ ತಜ್ಞ ಡಾ. ಮೊಹಮ್ಮದ್ ತೈಫ್ ಬೆಂಡಿಗೇರಿ, ಸ್ತ್ರೀರೋಗ ತಜ್ಞರಾದ ಡಾ. ಶ್ರುತಿಕಾ ಗೊಬ್ಬೂರು, ಆಸ್ಪತ್ರೆಯ ಎಲ್ಲಾ ಆಡಳಿತಾಧಿಕಾರಿಗಳು, ವ್ಯವಸ್ಥಾಪಕರು, ವಿವಿಧ ವಿಭಾಗಗಳ ಉಸ್ತುವಾರಿಗಳು, ಶುಶ್ರೂಷಕ ಸಿಬ್ಬಂದಿ ಹಾಗೂ ಹೌಕೀಪಿಂಗ್ ಸಿಬ್ಬಂದಿ ಉಪಸ್ಥಿತರಿದ್ದರು.

# ಮಾನವ ಕಲ್ಯಾಣವೇ ಎಲ್ಲದರ ಕೇಂದ್ರ ಬಿಂದು



ಕಲಬುರಗಿ : ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲರ ನುಡಿಯಾದ "ಈ ಭೂಮಿಯ ಮೇಲೆ ನಾವು ಕೈಲಾಸ ಕಾಣಬೇಕಾದರೆ ಎಲ್ಲ ಸಾಧನೆ, ಸಂಶೋಧನೆ, ಸಂವಿಧಾನ, ಜ್ಞಾನ, ವಿಜ್ಞಾನ, ಧರ್ಮ ಮತ್ತು ವ್ಯವಸ್ಥೆಗಳು ಮಾನವ ಕಲ್ಯಾಣದ ಕೇಂದ್ರ ಬಿಂದುಗಳಾಗಬೇಕು" ಎಂಬುದನ್ನು ಸುದೀರ್ಘವಾಗಿ ವಿವರಿಸುತ್ತಾ ನಮ್ಮ ಶಿಕ್ಷಣ ಕೇವಲ ಸ್ವಾರ್ಥಕ್ಕಾಗಿ ಅಲ್ಲ, ಸಮಾಜ ಹಾಗು ರಾಷ್ಟ್ರದ ಅಭಿವೃದ್ಧಿಗಾಗಿ ಮತ್ತು ಮನುಕುಲದ ಏಳ್ಗೆಗಾಗಿ ಎಂಬುದನ್ನು ನ್ಯಾಯಮೂರ್ತಿಗಳು ನಡೆದು ತೋ–ರಿಸಿದ್ದಾರೆ ಎಂದರು.

"ಸ್ವರ್ಗ ಮತ್ತು ನರಕಗಳು ಎಲ್ಲೋ ದೂರದಲ್ಲಿಲ್ಲ, ಅವು ಈ ಭೂಮಿಯ ಮೇಲೆಯೇ ಇವೆ. ಮನುಷ್ಯ ತನ್ನ ಸದಾಚಾರ, ಎಚ್ಚರಿಕೆಯ ಬದುಕು ಹಾಗೂ ಶ್ರದ್ಧೆಯ ಮೂಲಕವೇ ಈ ಧರೆಯನ್ನು ಕೈಲಾಸವನ್ನಾಗಿ ಪರಿವರ್ತಿಸಬಹುದು" ಎಂದು ಕಲ್ಯಾಣ ಆಶ್ರಮದ ಪೂಜ್ಯ ಮಹಾಂತ ಸ್ವಾಮೀಜಿಯವರು ತಿಳಿಸಿದರು.

ನ್ಯಾಯಮೂರ್ತಿ ಶಿವರಾಜ ವಿ. ಪಾಟೀಲ್ ಪ್ರತಿಷ್ಠಾನ ರಾಯಚೂರು, ಕಲಬುರ್ಗಿಯ ಸರ್ವಜ್ಞ ಮತ್ತು ಜಸ್ಟಿಸ್ ಶಿವರಾಜ ಪಾಟೀಲ್ ಪದವಿ ಪೂರ್ವ ವಿಜ್ಞಾನ ಮಹಾವಿದ್ಯಾಲಯ ಹಾಗೂ ಸರ್ವಜ್ಞ ಆಂಗ್ಲ ಮಾಧ್ಯಮ ಶಾಲೆಯ ಸಂಯುಕ್ತಾಶ್ರಯದಲ್ಲಿ ವಿದ್ಯಾರ್ಥಿಗಳಿಗಾಗಿ ಆಯೋಜಿಸಲಾಗಿದ್ದ ನ್ಯಾಯಮೂರ್ತಿಗಳ "ಮುಂಜಾವಿಗೊಂದು ನುಡಿ ಕಿರಣ–365ಗಳ ದರ್ಶನ" ಎಂಬ 9 ದಿನಗಳ ವಿಶೇಷ ಉಪನ್ಯಾಸ ಮಾಲಿಕೆಯ ಐದನೇ ದಿನವು ಅರ್ಥಪೂರ್ಣವಾಗಿತ್ತು.

ಸತ್ಯವನ್ನು ನುಡಿಯುವುದು ಹಾಗು ನಮ್ಮ ಒಳ್ಳೆಯ ನಡತೆಯೇ ಸ್ವರ್ಗ, ಕೆಟ್ಟ ನಡತೆಯೇ ನರಕ ಎಂದು ಇಂದಿನ ಯುವ ಪೀಳಿಗೆಗೆ ಮನದಟ್ಟಾಗಬೇಕು. ರಾಷ್ಟ್ರಕವಿ ಕುವೆಂಪು ಅವರು 'ಪುಣ್ಯದಾಲಯವದು ಪೃಥ್ವಿ, ಸ್ವರ್ಗವದು ಪರದೇಶೀ' ಎಂದಿದ್ದಾರೆ. ಅಂದರೆ ನಮ್ಮ ಕಣ್ಣಿಗೆ ಕಾಣುವ ಈ ಭೂಮಿಯೇ ನಿಜವಾದ ಪುಣ್ಯದ ಆಲಯ ಮತ್ತು ಸ್ವರ್ಗವಾಗಿದೆ. ಕಣ್ಣಿಗೆ ಕಾಣದೇ ಇರುವುದು ಪರದೇಶೀ ಎಂದು ಹೇಳಿದ್ದಾರೆ.

ಸ್ವಾಮಿ ವಿವೇಕಾನಂದರ "ಏಳಿ, ಎದ್ದೇಳಿ, ಗುರಿ ಮುಟ್ಟುವವರೆಗೆ ನಿಲ್ಲದಿರಿ" ಎಂಬ ಜಾಗೃತಿ ಕರೆ ಹಾಗೂ ಉಪನಿಷತ್ತಿನ "ಉತ್ತಿಷ್ಠತ ಜಾಗ್ರತ ಪ್ರಾಪ್ಯ ವರನ್ನಿಬೋಧತ" ಎಂಬ ಮಂತ್ರದ ಮೂಲಕ ನಿರಂತರವಾಗಿ ಎಚ್ಚರದಿಂದಿದ್ದು ಗುರಿಯತ್ತ ಸಾಗಲು ವಿದ್ಯಾರ್ಥಿಗಳಿಗೆ ಪ್ರೇರೇಪಿಸಿದರು.

ಈ ಸಂದರ್ಭದಲ್ಲಿ ಸಂಸ್ಥೆಯ ಸಂಸ್ಥಾಪಕರಾದ ಪ್ರೊ. ಚನ್ನಾರೆಡ್ಡಿ ಪಾಟೀಲ್, ಮುಖ್ಯ ಶೈಕ್ಷಣಿಕ ನಿರ್ದೇಶಕ ಅಭಿಷೇಕ್ ಚನ್ನಾರೆಡ್ಡಿ ಪಾಟೀಲ್, ಗೀತಾ ಚನ್ನಾರೆಡ್ಡಿ ಪಾಟೀಲ, ಪ್ರಾಂಶುಪಾಲ ಪ್ರಶಾಂತ್ ಕುಲಕರ್ಣಿ,ವಿನೂತಾ ಆರ್.ಬಿ., ಅನಿತಾ ಕುಲಕರ್ಣಿ, ಪ್ರಭುಗೌಡ ಸಿದ್ಧಾರೆಡ್ಡಿ, ಕರುಣೇಶ ಹಿರೇಮಠ, ಗುರುರಾಜ ಕುಲಕರ್ಣಿ ಸೇ–ರಿದಂತೆ ಉಪನ್ಯಾಸಕರು, ಶಿಕ್ಷಕರು ಮತ್ತು ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಡಾ.ಸುಬ್ಬಯ್ಯ ನೀಲಾ ಅವರ ಎರಡು ಕಲಾಕೃತಿ ಮೆಚ್ಚಿ ಪ್ರಧಾನ ಮಂತ್ರಿ ಪ್ರಶಂಸೆ ಪತ್ರ

ಕಲಬುರಗಿ:ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ಪ್ರಭಾವ ಕಲಾಪ್ರೇಮಿ ಮತ್ತು ಚಿತ್ರಕಲಾವಿದ–ರಿಗೆ ಅನೇಕ ಚಿತ್ರಕಲಾ ಚಟುವಟಿಕೆಗಳು ರಾಜ್ಯ, ರಾಷ್ಟ್ರಮಟ್ಟದ "ವಿಕಸಿತ್ ಭಾರತದ ಬಗ್ಗೆ ಅನೇಕ ಚಿತ್ರಕಲಾ ಪ್ರದರ್ಶನ ಹಾಗೂ ಶಿಬಿರಗಳು ನಡೆಸಿರುತ್ತಾರೆ. ರಾಜ್ಯ, ರಾಷ್ಟ್ರ, ಅಂತರಾಷ್ಟ್ರೀಯ ಕಲಾವಿದರು ಭಾಗಿಯಾಗಿದ್ದಾರೆ.

ಕಲ್ಯಾಣ ಕರ್ನಾಟಕದ, ಶರಣಬಸವ ವಿಶ್ವವಿದ್ಯಾಲಯ, ಕಲಬುರಗಿ. ಸ್ನಾತಕೋತ್ತರ ಚಿತ್ರಕಲಾ ವಿಭಾಗದ ಮುಖ್ಯಸ್ಥರಾದ ಡಾ.ಸುಬ್ಬಯ್ಯ ಎಂ ನೀಲಾ ಅವರು ರಚಿಸಿದ ಕಲಾಕೃತಿಗಳಾದ 1. "ವಿಕಸಿತ್ ಭಾರತ" ಮತ್ತು 2. "ಆಪರೇಷನ್ ಸಿಂಧೂರ್". ನಾನು ಭಾರತದ ಪ್ರಧಾನ ಮಂತ್ರಿ ಶ್ರೀ ನರೇಂದ್ರ ಮೋದಿಜೀಯವರಿಂದ

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಅಧ್ಯಕ್ಷರು ಹಾಗೂ ಶರಣಬಸವ ವಿಶ್ವವಿದ್ಯಾಲಯದ ಕುಲಾಧಿಪತಿಗಳಾದ ಪೂಜ್ಯ ಮಾತೋಶ್ರೀ. ಡಾ.ದಾಕ್ಷಾಯಿಣಿ ಎಸ್ ಅವ್ವಾಜಿ, ಶರಣಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿಯವರು, ಡಾ. ಸುಬ್ಬಯ್ಯ ಎಂ ನೀಲಾ ಅವ–ರಿಗೆ ಶುಭಕೋರಿ ಆರ್ಶಿವದಿಸಿದ್ದಾರೆ.

ಶರಣಬಸವೇಶ್ವರ ವಿದ್ಯಾವಶರ್ಧಕ ಸಂಘದ ಕಾರ್ಯದರ್ಶಿ ಬಸವರಾಜ ದೇಶಮುಖ,ಶರಣಬಸವ ವಿಶ್ವವಿದ್ಯಾಲಯದ ಕುಲಪತಿ ಡಾ.ಅನಿಲಕುಮಾರ ಬಿಡವೆ, ಕುಲಸಚಿವರು ಡಾ. ಲಕ್ಷ್ಮೀ ಪಾಟೀಲ/ಮಾಕಾ, ಕುಲಸಚಿವರು

(ಮೌಲ್ಯಮಾಪನ) ಡಾ. ಎಸ್. ಎಚ್. ಹೊನ್ನಳ್ಳಿ, ಡೀನರು ಡಾ. ಶಿವಕುಮಾರ ಜವಳಿ ಮತ್ತು ಡಾ. ಕಿರಣ ಮಾಕಾ ಹಣಕಾಸು ಅಧಿಕಾರಿಗಳು, ನಿರ್ದೇಶಕರಾದ ಡಾ. ವಿ.ಡಿ. ಮೈತ್ರಿ, ದೇವರಕಲ್ ಸರ್, ಡಾ. ಸುಜಾತಾ

ಮಲ್ಲಾಪೂರ ಸೇರಿದಂತೆ ವಿಶ್ವವಿದ್ಯಾಲಯದ ಅಧಿಕಾರಿಗಳು, ಡಾ.ಸುಬ್ಬಯ್ಯ ಎಂ ನೀಲಾ ಅವರನ್ನು ಅಭಿನಂದಿಸಿದ್ದಾರೆ.

# ಪಿಸ್ತೂಲ್‌ನಂತೆ ಹೋಲುವ ವಸ್ತು ತೋರಿಸಿ ಕೊಲೆಗೆ ಯತ್ನ: ಇಬ್ಬರ ಬಂಧನ

ಕಲಬುರಗಿ:ಬಾರ್ ಮತ್ತು ರೆಸ್ಟೋರೆಂಟ್ ಮಾಲಿಕನಿಗೆ ಪಿಸ್ತೂಲ್‌ನಂತೆ ಹೋಲುವ ವಸ್ತು ತೋರಿಸಿ ಕೊಲೆಗೆ ಯತ್ನಿಸಿದ ಪ್ರಕರಣ–ಕ್ಕೆ ಸಂಬಂಧಿಸಿದಂತೆ ಅಶೋಕ ನಗರ ಪೊಲೀಸರು ಇಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

ನಗರದ ಎಂಎಸ್‌ಕೆ ಮಿಲ್ ಏರಿಯಾದ ಇಕ್ಬಾಲ್ ಕಾಲೋನಿಯ ಸೈಯದ್ ಜಿಲಾನ್ ಅಲಿಯಾಸ್ ರೇತಿ ಬಾಬಾ ತಂದೆ ಸೈಯದ್ ಮುಸ್ತಾಫ್ (36) ಮತ್ತು ಜಾವೇದ್ ಪಟೇಲ್ ತಂದೆ ಉಸ್ಮಾನ್ ಪಟೇಲ್ (35) ಎಂಬುವವರನ್ನು ಬಂಧಿಸಿ ಕೃತ್ಯಕ್ಕೆ ಬಳಕೆ ಮಾಡಿದ ಗ್ರೇ ಕಲರ್ ಪಿಸ್ತೂಲ್‌ನಂತೆ ಕಾಣುವ ಒಂದು ಗ್ಯಾಸ್ ಲೈಟರ್ ಜಪ್ತಿ ಮಾಡಿ ಆರೋಪಿಗಳನ್ನು ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಮಧ್ಯಾಹ್ನ ನಗರದ ಬಿದ್ದಾಪುರ ಕಾಲೋನಿಯ ಅಫಜಲಪುರ ಕ್ರಾಸ್‌ನಲ್ಲಿರುವ ಬಾರ್ ಅಂಡ್ ಗಾರ್ಡನ್ ರೆಸ್ಟೋರೆಂಟಗೆ ಊಟಕ್ಕೆ ಹೋಗಿ ಎ.ಸಿ.ರೂಮಿನಲ್ಲಿ ಕುಳಿತು ಗುಟುಕಾ ತಿಂದು ಉಗಿಯುತ್ತ ವೇಟರ್ ಜೊತೆ ತಕರಾರು ಮಾಡಿದ್ದರು. ಈ ವಿಷಯ ಬಾರಿನ ಮ್ಯಾನೇಜರ್ ಗಮನಕ್ಕೆ ತಂದಾಗ ಅವರು ಸಮಾದಾನ ಮಾಡಿ ಕಳುಹಿಸು ಎಂದು ವೇಟರ್‌ಗೆ ಹೇಳಿದ್ದಾರೆ. ಪುನ: ಅವರು ಇದೇ ಕೃತ್ಯವೆಸಗಿದಾಗ ಬಾರ್ ಮಾಲಿಕನ ಸಹೋದರ ಇದನ್ನು ಪ್ರಶ್ನಿಸಿದ್ದು, ಈ ವೇಳೆ ಸೈಯ್ಯದ್ ಜಿಲಾನ್ ತನ್ನ ಹತ್ತಿರವಿದ್ದ ಪಿಸ್ತೂಲ್‌ನಂತೆ ಹೋಲುವ ವಸ್ತು ತೋರಿಸಿ ಕೊಲೆಗೆ ಯತ್ನಿಸಿದ್ದಾನೆ ಎಂದು ತಿಳಿದುಬಂದಿದೆ. ಈ ಸಂಬಂಧ ಅಶೋಕ ನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು. ಆರೋಪಿಗಳ ಪತ್ತೆಗೆ ನಗರ ಪೊಲೀಸ್ ಡಾ.ಶರಣಪ್ಪ ಎಸ್.ಡಿ.ಅವರು ಶ್ಲಾಘಿ–ಸಿದ್ದಾರೆ.

# ಆ.1 ರಂದು ವ್ಯಸನ ಮುಕ್ತ ದಿನಾಚರಣೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಕರ್ನಾಟಕ ರಾಜ್ಯ ಮದ್ಯಪಾನ ಸಂಯಮ ಮಂಡಳಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ವಿಜಯಪುರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಅವರ ಸಹಯೋಗದಲ್ಲಿ

ಪೂಜ್ಯ ಶ್ರೀ ಮ.ನಿ.ಪ್ರ. ಡಾ.ಮಹಾಂತ ಶಿವಯೋಗಿಗಳ ಜನ್ಮ ದಿನಾಚರಣೆ ಅಂಗವಾಗಿ ವ್ಯಸನ ಮುಕ್ತ ದಿನಾಚರಣೆಯನ್ನು ಆಗಸ್ಟ್ 1ರಂದು ಬೆಳಗ್ಗೆ 11 ಗಂಟೆಗೆ ನಗರದ ಗಾಂಧಿ ಚೌಕ ಹತ್ತಿರ ಇರುವ ಸರ್ಕಾರಿ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮವನ್ನು ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ಡಾ. ಎಂ.ಬಿ.ಪಾಟೀಲ ಅವರು ಉದ್ಘಾಟಿಸುವರು. ನಗರ ಶಾಸಕರಾದ ಬಸನಗೌಡ ಪಾಟೀಲ ಯತ್ನಾಳ ಅವರು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿ, ಶಾಸಕರು, ಜನಪ್ರತಿನಿಧಿಗಲು ಭಾಗವಹಿಸಲಿದ್ದಾರೆ.

ಡಾ. ಮಂಜುನಾಥ್ ಮಸಳಿ ವಿಶೇಷ ಉಪನ್ಯಾಸ ನೀಡಲಿದ್ದಾರೆ ಎಂದು ಪ್ರಕಟಣೆ ತಿಳಿಸಿದೆ.

# ಆ.1 ರೊಳಗಾಗಿ ಗಣತಿ ನಮೂನೆ ಹಿಂತಿರುಗಿಸಿ :ಮತದಾರರಿಗೆ ಮನವಿ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ನಾಗಠಾಣ ವಿಧಾನಸಭಾ ಮತಕ್ಷೇತ್ರದ ವಿಜಯಪುರ ನಗರ ವ್ಯಾಪ್ತಿಯಲ್ಲಿ ಬರುವ 44 ಮತಗಟ್ಟೆಗಳ ಮತಗಟ್ಟೆ ಅಧಿಕಾರಿಗಳು ಇಲ್ಲಿಯವರೆಗೆ 43,311 ಗಣತಿ ನಮೂನೆ ವಿತರಿಸಿ, 31,063 ಗಣತಿ ನಮೂನೆಗಳನ್ನು ಡಿಜಿಟೈಜೇಶನ್ ಮಾಡಿದ್ದಾರೆ ಎಂದು ವಿಜಯಪುರ ತಹಶೀಲ್ದಾರ್ ತಿಳಿಸಿದ್ದಾರೆ.

ನಗರ ವ್ಯಾಪ್ತಿಯ ಮತಗಟ್ಟೆ ಸಂಖ್ಯೆ 233 ರಿಂದ 276 ರವರೆಗೆ ಒಟ್ಟು 44 ಮತಗಟ್ಟೆಗಳಲ್ಲಿ ಜೂ. 30 ರಿಂದ ಜು. 29ರವರೆಗೆ ಈ ಸಾಧನೆ ಮಾಡಿದ್ದಾರೆ ಎಂದವರು ತಿಳಿಸಿದ್ದಾರೆ.

ಇನ್ನು 12248 ಗಣತಿ ನಮೂನೆಗಳನ್ನು ಮತದಾರರು ಭರ್ತಿ ಮಾಡಿ ಮರಳಿ ನೀಡದೆ ಇರುವುದರಿಂದ ಈ ನಮೂನೆಗಳು ಡಿಜಿಟೈಜೇಶನ್ ಆಗಿಲ್ಲ. ಈ ಕುರಿತು ಮಹಾನಗರ ಪಾಲಿಕೆಯ ಘನತಾಜ್ಯ ಸಂಗ್ರಹಣಾ ವಾಹನದಲ್ಲಿ ಮತ್ತು ಆಟೋರಿಕ್ಷಾಗಳಲ್ಲಿ ಎಲ್ಲ ಮತದಾರರಿಗೆ ಅರಿವು ಮೂಡಿಸಲಾಗಿದೆ. ಆದ್ಯಾಗ್ಯೂ ಕೆಲ ಮತದಾರರು ಬಿ.ಎಲ್.ಓ ಗಳಿಗೆ ಮರಳಿ ನಮೂನೆಗಳನ್ನು ಹಿಂತಿರುಗಿಸಿಲ್ಲ. ಕಾರಣ ಈಗಾಗಲೇ ಗಣತಿ ನಮೂನೆಗಳನ್ನು ಪಡೆದುಕೊಂಡ ಮತದಾರರು ಆ. 1ರೊಳಗಾಗಿ ಗಣತಿ ನಮೂನೆಗಳನ್ನು ಬಿಎಲ್ ಒ ಅವರಿಗೆ ಹಿಂತಿರುಗಿಸಬೇಕು ಎಂದವರು ತಿಳಿಸಿದ್ದಾರೆ.

ಈಗಾಗಲೇ ನೇಮಕ ಮಾಡಲಾದ ಎಲ್ಲ ರಾಜಕೀಯ ಪಕ್ಷಗಳ ಬೂತ್ ಮಟ್ಟದ ಏಜೆಂಟ–ರು (ಬಿ.ಎಲ್.ಎ) ಮತ್ತು ಎಲ್ಲ ರಾಜಕೀಯ ಪಕ್ಷದ ಪ್ರಮುಖರು ಮತದಾರರಿಗೆ ಸೂಕ್ತ ತಿಳುವಳಿಕೆ ನೀಡಿ ಗಣತಿ ನಮೂನೆಗಳನ್ನು ಅವಶ್ಯಕ ಮಾಹಿತಿಯೊಂದಿಗೆ ಹಿಂದಿರುಗಿಸಲು ಸಹಕರಿಸಬೇಕು ಎಂದವರು ತಿಳಿಸಿದ್ದಾರೆ.

# ಬಣಜಿಗರಿಗೆ 2ಎ ಮೀಸಲಾತಿ ಜಾರಿಗೆ ಆಗ್ರಹಿಸಿ ಮನವಿ



■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ಬಣಜಿಗ ಸಮುದಾಯವನ್ನು ಉದ್ಯೋಗ ಮೀಸಲಾತಿ ಉದ್ದೇಶಕ್ಕಾಗಿ ಪ್ರವರ್ಗ 2ಎ ಅಡಿಯಲ್ಲಿಯೇ ಪರಿಗಣಿಸಿ, ಕರ್ನಾಟಕ ಉಚ್ಚ ನ್ಯಾಯಾಲಯದ ಆದೇಶದಂತೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸರ್ಕಾರಕ್ಕೆ ಬಣಜಿಗ ಸಮುದಾಯದ ಮುಖಂಡರಿಂದ ತಹಶೀಲ್ದಾರ ಸಂತೋಷ ಮ್ಯಾಗರಿಯವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ ಮನವಿಯಲ್ಲಿ, ಮೈಸೂರು ಜಿಲ್ಲೆಯ ಕೊಳ್ಳೆಗಾಲದ ಶಿಕ್ಷಕಿ ಸುಮಿತ್ರಾ ಸಲ್ಲಿಸಿದ್ದ ಪ್ರಕರಣದಲ್ಲಿ ಕರ್ನಾಟಕ ಉಚ್ಚ ನ್ಯಾಯಾಲಯವು 2025ರ ಏಪ್ರಿಲ್ 9ರಂದು ನೀಡಿದ ತೀರ್ಪಿನಲ್ಲಿ, ಬಣಜಿಗ ಸಮುದಾಯವನ್ನು ಉದ್ಯೋಗಕ್ಕಾಗಿ ಪ್ರವರ್ಗ ಡಿ ಹಾಗೂ ಶಿಕ್ಷಣಕ್ಕಾಗಿ ಪ್ರವರ್ಗ ಬಿ ಅಡಿಯಲ್ಲಿ ವರ್ಗೀಕರಿಸಿರುವುದು ಸಮಾನತೆಯ ತತ್ವಕ್ಕೆ ವಿರುದ್ಧವಾಗಿದೆ ಎಂದು ಅಭಿಪ್ರಾಯಪಟ್ಟಿದೆ. ಅಲ್ಲದೆ, ಸಂವಿಧಾನದ ಪರಿಚ್ಛೇದ 16(4)ರ ಅನ್ವಯ ಉದ್ಯೋಗ ಮೀಸಲಾತಿಗೂ ಪ್ರವರ್ಗ ಬಿ (ಪ್ರಸ್ತುತ 2ಎ) ಅಡಿಯಲ್ಲಿಯೇ ಪರಿಗಣಿಸುವಂತೆ ಮರು ವರ್ಗೀಕರಣಕ್ಕೆ ಆದೇಶ ನೀಡಿದೆ ಎಂದು ಉಲ್ಲೇಖಿಸಲಾಗಿದೆ.

ಬಣಜಿಗ ಸಮುದಾಯ ಶೈಕ್ಷಣಿಕ ಹಾಗೂ ಸಾಮಾಜಿಕವಾಗಿ ಹಿಂದುಳಿದಿರುವ ಕಾರಣ ಸರ್ಕಾರಿ ಉದ್ಯೋಗಗಳಲ್ಲಿ ಸಮರ್ಪಕ ಅವಕಾಶಗಳಿಂದ ವಂಚಿತವಾಗುತ್ತಿದೆ. ಹೀಗಾಗಿ ಉಚ್ಚ ನ್ಯಾಯಾಲಯದ ಆದೇಶವನ್ನು ತ್ವರಿತವಾಗಿ ಜಾ–ರಿಗೆ ತಂದು, ಬಣಜಿಗ ಸಮುದಾಯಕ್ಕೆ ಉದ್ಯೋಗ ಮೀಸಲಾತಿಯಲ್ಲಿ ಪ್ರವರ್ಗ 2ಎ ಸೌಲಭ್ಯ ಕಲ್ಪಿಸುವ ಮೂಲಕ ಸಾಮಾಜಿಕ ನ್ಯಾಯ ಒದಗಿಸಬೇಕು ಎಂದು ಸರ್ಕಾರವನ್ನು ಒತ್ತಾಯಿಸಲಾಗಿದೆ. ಇದೆ ಸಂದರ್ಭದಲ್ಲಿ ಶಿವಾನಂದ ಶೀಲವಂತ

ಸಿದ್ರಾಮಪ್ಪ ಬಾಗಿ, ರಾಜಶೇಖರ ಶೀಲವಂತ ಬಸವರಾಜ ಹುಲ್ಯಾಳ, ರಾಚಪ್ಪ ಎಸ್ ಕೊಟ್ಟಗಿ ಈರಣ್ಣ ಎಂ ಕೊಟ್ಟಗಿ, ಬಸವರಾಜ ಕೋ–ರಿಚನಮಲ್ಲಪ್ಪ ಕೊಕಟನೂರ, ಸಂಗಪ್ಪ ತುಪ್ಪದ ರಾಜಶೇಖರ್ ತಿಮ್ಮಶೆಟ್ಟಿ, ಶರಣಪ್ಪ ಅನಗಡಿ ಸಿದ್ದು ಕಲಾದಗಿ ಸೇರಿದಂತೆ ಇತರರು ಇದ್ದರು

## ವಿಜಯಪುರ ದಲ್ಲಿ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಆನಂದ ಕೆ. ಅಧಿಕಾರಿಗಳಿಗೆ ಸೂಚನೆ

# ರಸ್ತೆ ಅಪಘಾತ ತಡೆಗೆ ಸುರಕ್ಷತಾ ಕ್ರಮ ವಹಿಸಿ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಜೀವ ಬಹು ಅಮೂಲ್ಯವಾಗಿದ್ದು, ವಾಹನ ಚಾಲಕರು ನಿರ್ಲಕ್ಷ್ಯ ವಹಿಸದೇ ಜಾಗರೂಕತೆಯಿಂದ ವಾಹನ ಚಲಾಯಿಸುವಂತೆ ಹಾಗೂ ರಸ್ತೆ ನಿಯಮ ಪಾಲಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸಾರ್ವಜನಿಕರಲ್ಲಿ ಜಾಗೃತಿ ವಹಿಸಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ. ಆನಂದ ಕೆ. ಅವರು ಸೂಚಿಸಿದರು. ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ರಸ್ತೆ ಸುರಕ್ಷತಾ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಲ್ಲಿರುವ ಅಪಘಾತ ವಲಯಗಳನ್ನು ಗುರುತಿಸಿ ರಸ್ತೆ ಅಪಘಾತ ತಡೆಗೆ ಕ್ರಮ ವಹಿಸಬೇಕು ಎಂದರು.ಜೊತೆಗೆ ನಿಯಮಿತವಾಗಿ ಸಭೆ ನಡೆಸುವ ಮೂಲಕ ಅಪಘಾತ ತಡೆಗೆ ಶ್ರಮಿಸಬೇಕು ಎಂದು ಜಿಲ್ಲಾಧಿಕಾರಿ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಗುರುತಿಸಲಾದ ಅಪಘಾತ ವಲಯದಲ್ಲಿ ಅಂಬುಲೆನ್ಸ್ ಇರಬೇಕು. ರಸ್ತೆ ಫಲಕ ಅಳವಡಿಸಿ, ತುರ್ತು ಸಂದರ್ಭದ ಅಗತ್ಯ ಮಾಹಿತಿ ವಿವರ ಹೊಂದಿರಬೇಕು ಎಂದರು.

ಜಿಲ್ಲೆಯಲ್ಲಿ ರಸ್ತೆ ಅಪಘಾತಗಳು ಮತ್ತು ಅವುಗಳಿಂದ ಸಂಭವಿಸುವ ಸಾವುಗಳನ್ನು ತಡೆಯುವ ನಿಟ್ಟಿನಲ್ಲಿ 'ಸೇವ್ ಲೈಫ್ ಫೌಂಡೇಶನ್ ಸಂಸ್ಥೆಯು ರೋಡ್ ಸೇಫ್ಟಿ ಆಕ್ಷನ್ ಪ್ಲಾನ್ ಎಂಬ ವಿಶೇಷ ಅಧ್ಯಯನ ವರದಿ ಬಿಡುಗಡೆ ಮಾಡಿದೆ. 2023 ಮತ್ತು 2024 ರ ಇ–ಡಾರ್ ವ್ಯವಸ್ಥೆಯ ಆಧ–ರದ ಮೇಲೆ ಈ ವಿವರವಾದ ವರದಿ ಸಿದ್ಧಪಡಿಸಲಾಗಿದೆ. ವರದಿಯಲ್ಲಿ ತಿಳಿಸಿರುವ ಮಾಹಿತಿ ಒದಗಿಸಿ ಅಪಘಾತ ವಲಯಗಳ ರಸ್ತೆ ಮಾರ್ಗಗಳಲ್ಲಿ ಗುರುತಿಸಲಾದ ಅಪಾಯಕಾರಿ ಸ್ಥಳ ಹಾಗೂ ಸಂಚಾರ ನಿಯಮಗಳ ಉಲ್ಲಂಘನೆಯಾಗದಂತೆ ಮುಂಜಾಗ್ರತೆ ವಹಿಸಿ ಸಭೆಯ ನಡವಳಿಯಂತೆ ಕಾರ್ಯ ಯೋಜನೆ ಸಿದ್ದಪಡಿಸಿಕೊಂಡು ಪ್ರತಿಯೊಬ್ಬ ಅಧಿಕಾರಿಯೂ ಕಾರ್ಯೋನ್ಮುಖರಾಗಬೇಕು. ಜೊತೆಗೆ ನಗರದಲ್ಲಿ ಹೆಚ್ಚುತ್ತಿರುವ ಸಂಚಾರ ದಟ್ಟಣೆ ಮತ್ತು ಅಪಘಾತಗಳನ್ನು ನಿಯಂತ್ರಿಸಬೇಕು ಎಂದು ಜಿಲ್ಲಾಧಿಕಾ–ರಿಗಳು ವಿವಿಧ ಇಲಾಖೆಗಳಿಗೆ ಸೂಚನೆ ನೀಡಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ ಮಾತನಾಡಿ, ಎಲ್ಲ ಇಲಾಖೆ ಅಧಿಕಾರಿಗಳು ಸಮನ್ವಯದಿಂದ ಕಾರ್ಯ ನಿರ್ವಹಿಸಿ ಅಪಘಾತ ತಡೆಗೆ ಕ್ರಮವಹಿಸಿ ಎಂದು ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಪ್ರೊಬೆಷನರ್ ಐಎಎಸ್ ಅಧಿಕಾರಿ ಅಭಿಷೇಕ ಸೇಹರ್, ಇಂಡಿ ಉಪ ವಿಭಾಗಾಧಿಕಾರಿಗಳಾದ ಚಿದಾನಂದ ಗುರುಸ್ವಾಮಿ, ಲೋಕೋಪಯೋಗಿ ಇಲಾಖೆಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಸಿ ಎಸ್ ಪೊಲೀಸ್ ಪಾಟೀಲ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಲ್ಲನಗೌಡ ಬಿರಾದಾರ, ಜಿಲ್ಲಾ ಶಸ್ತ್ರಚಿಕಿತ್ಸಕ ಶಿವಾನಂದ ಮಾಸ್ತಿಹೊಳಿ, ಉಪ ಅರಣ್ಯ ಸಂರಕ್ಷಣಾಧಿಕಾರಿಗಳಾದ ಮಲ್ಲಿಕಾರ್ಜುನ ಕುಸನಾಳ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಿಂ ಬಾಬಾ ಮುದ್ದೇಬಿಹಾಳ, ಅಬಕಾರಿ ಉಪ ಆಯುಕ್ತ ಮುರಳೀಧರ್, ಸಮಾಜಕಲ್ಯಾಣ ಇಲಾಖೆಯ ಉಪನಿರ್ದೇಶಕ ಮಹೇಶ ಪೋತದಾರ, ಪೀಟರ್ ಅಲೆಕ್ಸಾಂಡರ್ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಅಧಿಕಾರಿಗಳು ಉಪಸ್ಥಿತರಿದ್ದರು.

# ಗುರು ಪೂರ್ಣಿಮೆ ಗುರುವಿನ ಸ್ಮರಣೆ :ಲಿಂಗನಗೌಡ

■ ಉದಯರಶ್ಮಿ ದಿನಪತ್ರಿಕೆ



ಕೆಂಭಾವಿ: ಜ್ಞಾನದ ಮೂಲವಾಗಿರುವ ವೇದಗಳನ್ನು ನಾಲ್ಕು ಭಾಗಗಳಾಗಿ ವಿಂಗಡಿಸಿದ ಮಹರ್ಷಿ ವೇದವ್ಯಾಸರ ಜನ್ಮದಿನವನ್ನು ಗುರು ಪೂರ್ಣಿಮೆ ಎಂದು ಹಿರಿಯ ಸಾಹಿತಿ, ಲಿಂಗನಗೌಡ ಮಾಲಿ ಪಾಟೀಲ್ ಹೇಳಿದರು.

ಪಟ್ಟಣದ ಹಿರೇಮಠ ಸಂಸ್ಥಾನದಲ್ಲಿ ಶ್ರೀ ಗುರು ಕಾಂತೇಶ್ವರ ಜನಕಲ್ಯಾಣ ಸೇವಾ ಪ್ರತಿಷ್ಠಾನದ ವತಿಯಿಂದ ಬುಧವಾರ ಸಂಜೆ ಹಮ್ಮಿಕೊಂಡಿದ್ದ ಮಾಸಿಕ ಹುಣ್ಣಿಮೆಯ ಶಿವಾನುಭವ ಗೋಷ್ಠಿ ಉದ್ಘಾಟಿಸಿ ಮಾತನಾಡಿದ ಅವರು, ಜಗವ ಬೆಳಗಲು ಸೂರ್ಯ ಚಂದ್ರರು ಹೇಗೆ ಮುಖ್ಯವೋ ಹಾಗೆಯೇ ಪ್ರತಿಯೊಬ್ಬರ ಜೀವನ ಬೆಳಗಲು ಸದ್ಗುರುವಿನ ಸಾಮಿಪ್ಯ ಅಷ್ಟೇ ಮುಖ್ಯ ಎಂದವರು, ಶ್ರೀಮಠದಲ್ಲಿ ಆರಂಭವಾದ ಶಿವಾನುಭವ ಗೋಷ್ಠಿ ಯಶಸ್ವಿಯಾಗಿ ಹನ್ನೊಂದು ವರ್ಷಗಳನ್ನು ಪೂರೈಸಿ ಹನ್ನೆರಡನೇ ವರ್ಷಕ್ಕೆ ಪಾದಾರ್ಪಣೆ ಮಾಡಿದ್ದು ಅತೀವ ಸಂತಸ ತಿಂದಿದೆ ಎಂದರು.ಉಪನ್ಯಾಸ ನೀಡಿದ ಮಲ್ಲಯ್ಯ ಸ್ವಾಮಿ ವಡಿಗೇರಿ ದುರಹಂಕಾರ, ದುರ್ಬುದ್ಧಿ ದುರ್ಬಲ ಮನಸ್ಸಿನ ವ್ಯಕ್ತಿಗಳಿಗೆ ಗುರು ಯಾವತ್ತೂ ದೊರೆಯುವುದಿಲ್ಲ, ಕಾಯ, ವಾಚ, ಮನಸಾರೆ ಭಜಿಸಿದಾಗ ಗುರು ಕೃಪೆ ಸುಲಭ ಸಾಧ್ಯ ಎಂದರು. ಕಾರ್ಯಕ್ರಮದ ಸಾನಿಧ್ಯ ವಹಿಸಿದ ಚನ್ನಬಸವ ಶಿವಾಚಾರ್ಯರು ಆಶೀರ್ವಚನ ನೀಡಿದರು. ಇದೇ ವೇಳೆ ಸಾಸನೂರಿನ ಚಿಂಚರಕಿ ಮಠದ ಶ್ರೀಕಾಂತಯ್ಯ ಶಾಸ್ತ್ರಿಗಳು, ಶ್ರೀ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯ ಸಹಾಯಕಿ ಮಹಾದೇವಿ ಸರ್ಜಾಪುರ ಮಾತನಾಡಿದರು, ಪುರಸಭೆ ನೂತನ ಅಧ್ಯಕ್ಷೆ ಗಿರೀಜಾ ರಮೇಶ ಕೊಡಗಾನೂರು ದಂಪತಿಗಳನ್ನು ಸನ್ಮಾನಿಸಿ ಗೌರವಿಸಲಾಯಿತು.

ಶರಣು ಕುಮಾರ ಯಾಳಗಿ ಹಾಗೂ ಯಮನೇಶ ಯಾಳಗಿ ಇವರಿಂದ ಸಂಗೀತ ಕಾರ್ಯಕ್ರಮ ಮೂಡಿ ಬಂತು,

ಪ್ರಮುಖರಾದ ಪುರಸಭೆ ಉಪಾಧ್ಯಕ್ಷೆ ಸುಪುತ್ರ ಶಿವಪ್ಪ ಕಂಬಾರ, ಪುರಸಭೆ ಸದಸ್ಯ ಚಳಿಗೆಪ್ಪ ಮ್ಯಾಗೇರಿ, ಸಾಹಿತಿ ನಿಂಗನಗೌಡ ದೇಸಾಯಿ, ದೇವಿ ಆರಾಧಕ ಬಸವರಾಜ, ಯಲ್ಲಾಲಿಂಗ ನಡಿಗೇರಿ, ಅಭಿಷೇಕ ಪಾಟೀಲ್ ಸೇರಿದಂತೆ ಅನೇಕ ಸದ್ಭಕ್ತರು ಉಪಸ್ಥಿತರಿದ್ದರು. ಡಾ ಯಂಕನಗೌಡ ಪಾಟೀಲ್ ನಿರೂಪಿಸಿ ವಂದಿಸಿದರು.

# ಕೈಲಾಸ ಮಾನಸಸರೋವರ ಯಾತ್ರೆ ಅದೊಂದು ಆಧ್ಯಾತ್ಮಿಕ ಅನುಭವ

■ ಉದಯರಶ್ಮಿ ದಿನಪತ್ರಿಕೆ



■ ಸಿಂದಗಿ ಸಾರಂಗಮಠದಲ್ಲಿ 357ನೇ ಸದ್ವಿಚಾರ ಗೋಷ್ಠಿ । ಯಾತ್ರಿಕರಿಗೆ ಸನ್ಮಾನ । ಗ್ರಂಥ ಬಿಡುಗಡೆ । ಡಾ.ವಿಶ್ವಪ್ರಭುದೇವ ಶಿವಾಚಾರ್ಯ ಅಭಿಮತ

ಸಿಂದಗಿ: ಹಿಮಾಲಯದ ಶಾಂತ ವಾತಾವರಣದಲ್ಲಿ ದೇವರ ಸಾನ್ನಿಧ್ಯವನ್ನು ಅನುಭವಿಸುವ ಅವಕಾಶ ನೀಡುವ ಕೈಲಾಸ ಮಾನಸಸರೋವರ ಯಾತ್ರೆ ಭಕ್ತರಿಗೆ ಕೇವಲ ಪ್ರವಾಸವಲ್ಲ, ಅದು ಜೀವನದಲ್ಲಿ ಮರೆಯಲಾಗದ ಆಧ–ನ್ಯಾತ್ಮಿಕ ಅನುಭವವಾಗಿದೆ. ಈ ಯಾತ್ರೆಯು ಅತ್ಯಂತ ಪ್ರಮುಖ ಹಂತವಾಗಿದೆ ಎಂದು ಸಾರಂಗಮಠದ ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರು ಹೇಳಿದರು.

ಸಿಂದಗಿ ನಗರದ ಸಾರಂಗಮಠದಲ್ಲಿ ಗುರುಪೂರ್ಣಿಮೆ (ಕಡ್ಲಿಗರ ಹುಣ್ಣಿಮೆ) ಅಂಗವಾಗಿ ಚೆನ್ನವೀರಸ್ವಾಮೀಜಿ ಪ್ರತಿಷ್ಠಾನದ ಆಶ್ರಯದಲ್ಲಿ ಹಮ್ಮಿಕೊಂಡ 357ನೇ ಸದ್ವಿಚಾರಗೋಷ್ಠಿ ಹಾಗೂ ನೇಪಾಳ, ಚೀನಾ ಹಾಗೂ ಟಿಬೆಟ್ ಗಡಿ ಭಾಗದಲ್ಲಿರುವ ಹಿಮಾಲಯದ ಕೈಲಾಸ ಮಾನಸ ಸರೋವರ ತೀರ್ಥಯಾತ್ರೆಯ ಅನುಭವ ಉದ್ದೇಶಿಸಿ ಮಾತನಾಡಿದ ಅವರು, ಕೈಲಾಸ ಮಾನಸ ಸರೋವರವು ವಿಶ್ವದ ಅತ್ಯಂತ ಪವಿತ್ರ ಕ್ಷೇತ್ರಗಳಲ್ಲಿ ಒಂದಾಗಿದೆ. ಅಲ್ಲಿನ ದೈವಿಕ ವಾತಾವರಣ, ಆಧ್ಯಾತ್ಮಿಕ ಅನುಭವ ಮತ್ತು ಪ್ರಕೃತಿಯ ಸೌಂದರ್ಯ ಮನಸ್ಸಿಗೆ ಅಪಾರ ಸಂತಸ ಹಾಗೂ ನೆಮ್ಮದಿಯನ್ನು ನೀಡುತ್ತದೆ. ಈ ಯಾತ್ರೆ ಜೀವನದಲ್ಲಿ ಮರೆಯಲಾಗದ ಅನುಭವವಾಗಿದೆ ಎಂದು ಕೈಲಾಸ–ಮಾನಸ ಸರೋವರದ ಪವಿತ್ರ ಯಾತ್ರೆಯು ಜೀವನದಲ್ಲಿ ಆತ್ಮಸಾಕ್ಷಾತ್ಕಾರ ಮತ್ತು ಭಕ್ತಿಭಾವವನ್ನು ಮತ್ತಷ್ಟು ಗಟ್ಟಿಗೊಳಿಸುವ ಸಾಧನೆಯಾಗಿದೆ. ಧರ್ಮ ಮತ್ತು ಕರ್ಮ ಎಂಬ ಎರಡು ಪವಿತ್ರ ಹೊಂಡಗಳಲ್ಲಿ ಭಕ್ತರು ಸಂಪ್ರದಾಯದಂತೆ ಸ್ನಾನ ಮಾಡುವ ಅವಕಾಶ ದೊರೆಯಿತು. ಜೊತೆಗೆ ನೇಪಾಳದ ಭಕ್ತಪೂರ ಗ್ರಾಮದಲ್ಲಿರುವ ವೀರಭಕ್ತ ಲಿಂಗ ಜಂಗಮ ಮಠಕ್ಕೂ ಭೇಟಿ ನೀಡಿದೆವು. ಸದ್ಗುರುವಿನ ಆಶೀರ್ವಾದ ಮತ್ತು ಹಾರೈಕೆಯಿಂದಲೇ ಕೈಲಾಸ ಯಾತ್ರೆಯನ್ನು ಯಾವುದೇ ಅಡೆತಡೆಯಿಲ್ಲದೆ ಪೂರ್ಣಗೊಳಿಸಲು ಸಾಧ್ಯವಾಯಿತು. ಈ ಪವಿತ್ರ ಯಾತ್ರೆಯು ನಮ್ಮ ಮನಸ್ಸಿನಲ್ಲಿ ಹೊಸ ಚೈತನ್ಯ, ಭಕ್ತಿ ಮತ್ತು ಆಧ್ಯಾತ್ಮಿಕ ತೃಪ್ತಿಯನ್ನು ಮೂಡಿಸಿದೆ ಎಂದು ತಮ್ಮ ಅನುಭವವನ್ನು ಹಂಚಿಕೊಂಡರು. ಈ ವೇಳೆ ಡೋಣೂರು–ಕೊಟ್ಟೂರು ಡಾ.ಸಿದ್ದಲಿಂಗ ಶಿವಾಚಾರ್ಯರು ಮಾತನಾಡಿ, ಸಿಂದಗಿ ತಾಲೂಕಿನಲ್ಲಿ ಶಿಕ್ಷಣದ ಬೆಳಕನ್ನು ಹರಡಿ, ಸಾವಿರಾರು ವಿದ್ಯಾರ್ಥಿಗಳ ಬದುಕಿಗೆ ದಿಕ್ಕು ತೋರಿಸಿ, ಸಿಂದಗಿಯನ್ನು ಶಿಕ್ಷಣದ ಕಾಶಿಯನ್ನಾಗಿ ರೂಪಿಸುವಲ್ಲಿ ಶ್ರೀಮಠದ ಪೂಜ್ಯರ ಕೊಡುಗೆ ಅವಿಸ್ಮರಣೀಯವಾಗಿದೆ. ಅವರ ದೂರದೃಷ್ಟಿ, ಶಿಕ್ಷಣಪ್ರೇಮ ಹಾಗೂ ಮಾನವೀಯ ಮೌಲ್ಯಗಳ ಸೇವೆಗೆ ಈ ಸಂದರ್ಭದಲ್ಲಿ ಗೌರವಪೂರ್ವಕ ನಮನ ಸಲ್ಲಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದ ಅವರು, ಯಾತ್ರೆಯ ಆಧ್ಯಾತ್ಮಿಕ ಮಹತ್ವ, ಪ್ರಕೃತಿಯ ವೈಭವ, ಯಾತ್ರೆಯಲ್ಲಿನ ಸವಾಲುಗಳು ಹಾಗೂ ಭಕ್ತರು ಅನುಭವಿಸುವ ದೈವಿಕ ಅನುಭೂತಿಗಳ ಕುರಿತು ವಿವರವಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ತೀರ್ಥಯಾತ್ರೆಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿ ಆಗಮಿಸಿದ ಡೋಣೂರು–ಕೊಟ್ಟೂರು ಡಾ.ಸಿದ್ದಲಿಂಗ ಶಿವಾಚಾರ್ಯರು ಹಾಗೂ ಸಾರಂಗಮಠದ ಉತ್ತರಾಧಿಕಾರಿ ಡಾ.ವಿಶ್ವಪ್ರಭುದೇವ ಶಿವಾಚಾರ್ಯರಿಗೆ ಭಕ್ತಿಪೂರ್ವಕವಾಗಿ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು, ವಿವಿಧ ಅಂಗ ಸಂಸ್ಥೆಗಳಿಂದ ಗೌರವಿಸಿ ಸನ್ಮಾನಿಸಲಾಯಿತು. ಮಹಾದೇವಿ ಹಿರೇಮಠಅವರವಿರಚಿತಸಿಂದಗಿಚೆನ್ನವೀರ ಅಪ್ಪಗಳ ನಾಮಾವಳಿ ಹಾಗೂ ಹಾಡುಗಳ ಗ್ರಂಥ ಲೋಕಾರ್ಪಣೆಗೊಂಡಿತು.

ಕಾರ್ಯಕ್ರಮದ ಪಾವನ ಸಾನಿಧ್ಯವನ್ನು ಡಾ.ಪ್ರಭುಸಾರಂಗದೇವ ಶಿವಾಚಾರ್ಯರು ವಹಿಸಿದ್ದರು. ಊರಿನ ಹಿರಿಯ ಮಠದ ಪೂಜ್ಯರಾದ ಶಿವಾನಂದ ಶಿವಾಚಾರ್ಯರು ಇದ್ದರು. ಡಾ.ಶರಣಬಸವ ಜೋಗುರ ಸ್ವಾಗತಿಸಿದರು. ಪೂಜಾ ಹಿರೇಮಠ ಪ್ರಾರ್ಥಿಸಿ, ನಿರೂಪಿಸಿದರು ವಂದಿಸಿದರು. ಕಾರ್ಯಕ್ರಮದಲ್ಲಿ ಸಂಸ್ಥೆಯ ನಿರ್ದೇಶಕರಾದ ಅಶೋಕ ವಾರದ, ಗಂಗಾಧರ ಜೋಗುರ, ಅಶೋಕ ಮಸಳಿ, ಅಶೋಕ ಬೂದಿಹಾಳ, ವಿವೇಕಾನಂದ ಸಾಲಿಮಠ, ಆಡಳಿತಾಧಿಕಾರಿ ಡಾ.ಬಿ.ಜಿ.ಮಠ, ಎಸ್.ಎಸ್.ಮಲ್ಲೇದ, ಡಾ.ಮಹಾಂತೇಶ ಹಿರೇಮಠ, ಡಾ.ಪ್ರಶಾಂತ ಬಮ್ಮಣ್ಣಿ ಸೇರಿದಂತೆ ಸಂಸ್ಥೆಯ ವಿವಿಧ ಅಂಗ ಶಿಕ್ಷಣ ಸಂಸ್ಥೆಗಳ ಪ್ರಾಚಾರ್ಯರು, ಸಿಬ್ಬಂದಿ, ವಿದ್ಯಾರ್ಥಿಗಳು, ಶ್ರೀಮಠದ ಶಿಷ್ಯವೃಂದ, ಗ್ರಾಮಸ್ಥರು ಮತ್ತು ಅಪಾರ ಸಂಖ್ಯೆಯ ಸದ್ಭಕ್ತರು ಇದ್ದರು.

## ಅಧಿಕಾರಿಗಳು ತೀವ್ರ ನಿಗಾವಹಿಸಿ ಕ್ರಮ ಕೈಗೊಳ್ಳಲು ಜಿಲ್ಲಾಧಿಕಾರಿ ಡಾ.ಆನಂದ.ಕೆ ಸೂಚನೆ

# ಇಟ್ಟಂಗಿ ಭಟ್ಟಿಯಲ್ಲಿ ಬಾಲಕಾರ್ಮಿಕರಿದ್ದರೆ ಕಾನೂನು ಕ್ರಮ

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: ಇಟ್ಟಂಗಿ ಭಟ್ಟಿ, ಹೊಟೇಲ್ ಸೇರಿದಂತೆ ಯಾವುದೇ ಉದ್ಯೋಗ ಕ್ಷೇತ್ರಗಳಲ್ಲಿ ಬಾಲಕಾರ್ಮಿಕರು ಕಾರ್ಯನಿರ್ವಹಿಸದಂತೆ ಜಿಲ್ಲೆಯ ಸಂಬಂಧಿಸಿದ ಅಧಿಕಾ–ರಿಗಳು ತೀವ್ರ ನಿಗಾವಹಿಸಿ ಕ್ರಮ ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳಾದ ಡಾ.ಆನಂದ.ಕೆ ಅವರು ಸೂಚಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಕಲ್ಯಾಣ ವಿಭಾಗದ ಕೌಟುಂಬಿಕ ಹಿಂಸೆಯಿಂದ ಮಹಿಳೆಯರ ಸಂರಕ್ಷಣಾ ಕಾಯ್ದೆ–2005, ಬಾಲ್ಯವಿವಾಹ ತಡೆ ಕಾಯ್ದೆ ಹಾಗೂ ಪೋಕ್ಸೋ ಕಾಯ್ದೆಗಳ ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಅಧಿಕಾ–ರಿಗಳಿಗೆ ಈ ಸೂಚನೆ ನೀಡಿದರು.

ಜಿಲ್ಲೆಯ ಎಲ್ಲಾ ಶಾಲಾ–ಕಾಲೇಜುಗಳಲ್ಲಿ ಪೋಕ್ಸೋ ಹಾಗೂ ಬಾಲ್ಯವಿವಾಹ ತಡೆ ಕಾಯ್ದೆಗಳ ಕು–ರಿತು ಜಾಗೃತಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು. ಸಮಾಜದಿಂದ ಬಾಲ್ಯವಿವಾಹ ಪದ್ಧತಿಯನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡಲು ಪ್ರತಿಯೊಂದು ಇಲಾಖೆಯು ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಬೇಕು ಎಂದು ಸೂಚಿಸಿದರು.

ನಗರ ಹಾಗೂ ತಾಲೂಕು ಕೇಂದ್ರಗಳಲ್ಲಿ ಯಾವುದೇ ಮಕ್ಕಳು ಭಿಕ್ಷಾಟನೆಯಲ್ಲಿ ತೊಡಗದಂತೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು. ಮಕ್ಕಳ ರಕ್ಷಣೆಗಾಗಿ ಪ್ರತಿ ತಿಂಗಳು ಕನಿಷ್ಠ ಒಂದು ವಿಶೇಷ ಜಾಗೃತಿ ಕಾರ್ಯಕ್ರಮವನ್ನು ಆಯೋಜಿಸಬೇಕು ಎಂದು ಜಿಲ್ಲಾಧಿಕಾರಿಗಳು ಸಲಹೆ ಮಾಡಿದರು.

ಪಾಲನಾ ಸಂಸ್ಥೆಗಳಿಗೆ ತಿಂಗಳಿಗೆ ಎರಡು ಸಲ ಭೇಟಿ ಮಾಡಿ, ಮಕ್ಕಳಿಗಿರುವ ಸೌಲಭ್ಯಗಳ ಬಗ್ಗೆ ನಿಗಾವಹಿಸಿ, ಮಕ್ಕಳಿಗೆ ಸರಿಯಾದ ಆಹಾರದ ಬಗ್ಗೆ ಗಮನಹರಿಸಬೇಕು. ಜೊತೆಗೆ ಅಧಿಕಾರಿಗಳು ಮಕ್ಕಳೊಂದಿಗೆ ಮಾತನಾಡಿ, ಸಿಸಿಟಿವಿ ಕ್ಯಾಮರಾ ಅಳವಡಿಸಿ, ಅಲ್ಲಿನ ಮೂಲಭೂತ ಸೌಲಭ್ಯ ಕಲ್ಪಿಸಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು ಎಂದರು. ಮಕ್ಕಳ ಸಹಾಯವಾಣಿ ಕೇಂದ್ರಗಳಿಗೆ ಏಪ್ರಿಲ್ 26ರಿಂದ ಜೂನ್ ರೆಗೆ 141 ಇದರಲ್ಲಿ 130 ಪ್ರಕರಣ ಇತ್ಯರ್ಥಪಡಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಸಭೆಯಲ್ಲಿ ಕೌಟುಂಬಿಕ ಹಿಂಸೆ ತಡೆ ಕಾಯ್ದೆಯಡಿ ಜಿಲ್ಲೆಯಲ್ಲಿ ಇಲ್ಲಿಯವರೆಗೆ ಒಟ್ಟು 149 ಪ್ರಕರಣಗಳು ಬಾಕಿ ಉಳಿದಿರುವ ಕುರಿತು ಸುದೀರ್ಘವಾಗಿ ಚರ್ಚಿಸಲಾಯಿತು. ಜೊತೆಗೆ ಬಾಲ್ಯವಿವಾಹ ತಡೆ ಹಾಗೂ ಪೋಕ್ಸೋ ಕಾಯ್ದೆಯಡಿ ದಾಖಲಾದ ಪ್ರಕರಣಗಳ ಕುರಿತು ಏಪ್ರಿಲ್ ನಿಂದ ಜೂನ್ ಅವಧಿಯ ಸಮಗ್ರ ಮಾಹಿತಿಯನ್ನು ಅಧಿಕಾರಿಗಳು ಸಭೆಗೆ ನೀಡಿದರು.

ಸಂತ್ರಸ್ತ ಮಹಿಳೆಯರು ಮತ್ತು ಮಕ್ಕಳಿಗೆ ತಕ್ಷಣವೇ ಅಗತ್ಯ ಕಾನೂನು ನೆರವು ಒದಗಿಸಬೇಕು. ಈ ಕಾಯ್ದೆಗಳ ಕುರಿತು ನಿರಂತರವಾಗಿ ತಿಳಿವಳಿಕೆ ಮೂಡಿಸಬೇಕು. ಶಾಲೆಗಳಿಂದ ಹೊರಗುಳಿದ ಮಕ್ಕಳ ಕು–ರಿತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದ ಜಿಲ್ಲಾಧಿಕಾ–ರಿಗಳು, ಒಂದು ತಿಂಗಳಿಗಿಂತ ಹೆಚ್ಚು ಕಾಲ ಶಾಲೆಗೆ ಗೈರುಹಾಜರಾಗಿರುವ ಮಕ್ಕಳ ಪಟ್ಟಿಯನ್ನು ಆಯಾ ಶಾಲಾ ಮುಖ್ಯೋಪಾಧ್ಯಾಯರಿಂದ ಪಡೆದುಕೊಳ್ಳಬೇಕು. ಮಗು ಶಾಲೆಗೆ ಬಾರದಿರಲು ನಿಖರ ಕಾರಣವೇನು ಎಂಬುದನ್ನು ಕಂಡುಕೊಂಡು, ಅವರ ಪೋಷಕರನ್ನು ಸಂಪರ್ಕಿಸಿ ಸೂಕ್ತ ಸಲಹೆ ನೀಡಬೇಕು. ಬಳಿಕ ಆ ಮಕ್ಕಳನ್ನು ಮತ್ತೆ ಶಾಲೆಗೆ ಮರು ದಾಖಲಿಸಲು ಕ್ರಮ ವಹಿಸಬೇಕು ಎಂದು ಅಧಿಕಾ–ರಿಗಳಿಗೆ ನಿರ್ದೇಶನ ನೀಡಿದರು.

ಸಭೆಯಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಅರವಿಂದ ಹಾಗರಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಲಕ್ಷ್ಮಣ ನಿಂಬರಗಿ, ಪ್ರೊಬೆಷನರ್ ಐಎಎಸ್ ಅಧಿಕಾರಿ ಅಭಿಷೇಕ ಸೇಹರ್, ಇಂಡಿ ಉಪ ವಿಭಾಗಾಧಿಕಾರಿಗಳಾದ ಚಿದಾನಂದ ಗುರುಸ್ವಾಮಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಮಲ್ಲನಗೌಡ ಬಿರಾದಾರ, ಪ್ರಾದೇಶಿಕ ಸಾರಿಗೆ ಅಧಿಕಾರಿ ವಸಿಂಬಾಬಾ ಮುದ್ದೇಬಿಹಾಳ, ಯುವ ಸಬಲೀಕರಣ ಹಾಗೂ ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕರಾದ ರಾಜಶೇಖರ ದೈವಾಡಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ದೀಪಾ ಕಾಳೆ, ಇಂಡಿ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಬಸವರಾಜ ಜಿಗಳೂರು, ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.

# ನಗರ ಮತಕ್ಷೇತ್ರದಲ್ಲಿ 2,00,109 ಗಣತಿ ನಮೂನೆ

■ ಉದಯರಶ್ಮಿ ದಿನಪತ್ರಿಕೆ

■ ಡಿಜಿಟೈಜ್ ಪಾಲಿಕೆ ಆಯುಕ್ತ ವಿಜಯ ಮೆಕ್ಕಳಕಿ ಹೇಳಿಕೆ



ವಿಜಯಪುರ: ನಗರ ವಿಧಾನಸಭಾ ಕ್ಷೇತ್ರದ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆಗೆ ಸಂಬಂಧಿಸಿದಂತೆ ಗುರುವಾರ ಮಧ್ಯಾಹ್ನದವರೆಗೆ 2,90,184 ಗಣತಿ ನಮೂನೆ ವಿತರಿಸಲಾಗಿದ್ದು, 2,00,109 ನಮೂನೆಗಳನ್ನು ಡಿಜಿ–ಟೈಜ್ ಮಾಡಲಾಗಿದೆ ಎಂದು ಮತದಾರರ ನೋಂದಣಾಧಿಕಾರಿಯೂ ಆಗಿರುವ ಪಾಲಿಕೆ ಆಯುಕ್ತರಾದ ವಿಜಯ ಮೆಕ್ಕಳಕಿ ಹೇಳಿದರು. ಮಹಾನಗರ ಪಾಲಿಕೆಯ ಸಭಾಂಗಣದಲ್ಲಿ ರಾಜಕೀಯ ಪಕ್ಷಗಳ ಮುಖಂಡರೊಂದಿಗೆ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಆನ್‌ಲೈನ್‌ನಲ್ಲಿ 2,460 ನಮೂನೆಗಳು ಸಲ್ಲಿಕೆಯಾಗಿವೆ.

32,851 ಗೈರು ಹಾಜರಾದ ಮತದಾರರು, 21,158 ಶಾಶ್ವತವಾಗಿ ಸ್ಥಳಾಂತರಗೊಂಡಿದ್ದಾರೆ ಎಂದವರು ವಿವರಿಸಿದರು.7,523 ಮತದಾರರು: ಮರಣ ಹೊಂದಿದ್ದಾರೆ. ಈಗಾಗಲೇ 7,264 ಮತದಾರರು ಹಾಗೂ 315 ನೋಂದಾಯಿಸಿಕೊಂಡಿದ್ದಾರೆ ಎಂದವರು ತಿಳಿಸಿದರು.

ಈ ಪ್ರಕ್ರಿಯೆಗೆ ಆಗಸ್ಟ್ 08 ಅರ್ಜಿ ಸಲ್ಲಿಕೆಗೆ ಅಂತಿಮ ಗಡುವು. ಬಿಎಲ್‌ಒಗಳು ಮತದಾರರ ಮನೆ ಮನೆಗೆ ತೆರಳಿ 2–3 ಬಾರಿ ಭೇಟಿ ನೀಡಿದರೂ ಸಹ ಇನ್ನು ಸುಮಾರು 21,259 ಮತದಾರರ ಗಣತಿ ನಮೂನೆಗಳು ಮರಳಿ ಸಿಗದೆ ಬಾಕಿ ಉಳಿದಿವೆ ಎಂದರು. ಸಾರ್ವಜನಿಕರು ಹಾಗೂ ಮತದಾರರು ಭರ್ತಿ ಮಾಡಿದ ಗಣತಿ ನಮೂನೆಗಳನ್ನು ಆ. 8 ರೊಳಗಾಗಿ ಸಂಬಂಧಿಸಿದ ಬಿಎಲ್‌ಒಗಳಿಗೆ ಕಡ್ಡಾಯವಾಗಿ ಸಲ್ಲಿಸಬೇಕು ಎಂದರು. ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಅಂತಹ ಮತದಾರರ ಹೆಸರುಗಳನ್ನು ಮತದಾರರ ಕರಡು ಪಟ್ಟಿಯಿಂದ ಹೊರಗಿಡಲಾಗುವುದು ಎಂದು ಆಯುಕ್ತರು ತಿಳಿಸಿದರು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR